# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –279 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ:30–05–2025 ಶುಕ್ರವಾರ | ಪುಟ: 4 | ಬೆಲೆ : ರೂ.2–00
Volume - 02 Issue - 279 | RNI No: KARKAN/2023/88462 | KA/SK/CTA-874/2024-2026 | Chitradurga | Date: 30-05-2025 Friday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಕಂದಾಯ ಭೂಮಿ ಒತ್ತುವರಿ ತೆರವಿಗೆ ಪ್ರಯತ್ನಿಸಿ: ಪ್ರಾದೇಶಿಕ ಆಯುಕ್ತ ಬಿಸ್ವಾಸ್ 2

ಪೌರಕಾರ್ಮಿಕರ ಹಿತರಕ್ಷಣೆಗೆ ಸರ್ಕಾರಕ್ಕೆ ಮನವಿ: ಶಾಸಕ ಟಿ.ರಘುಮೂರ್ತಿ 3

ನಿಲುಗಂಬದ ಜನ ಒನ್ಯೆಡಾ ನೇಷನ್ಸ್ (ಆದಿವಾಸಿ) 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಪತ್ರಕರ್ತ ಚನ್ನಬಸವಯ್ಯ ನಿಧನ: ವೈದ್ಯಕೀಯ ಕಾಲೇಜಿಗೆ ದೇಹದಾನ

» ಚಿತ್ರದುರ್ಗ



ಹೊಳಲ್ಕೆರೆ ರಸ್ತೆಯ ನೆಹರು ನಗರ ನಿವಾಸಿ, ಪತ್ರಕರ್ತ ಚನ್ನಬಸವಯ್ಯ(46) ಗುರುವಾರ ಬೆಳಗ್ಗೆ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು. ಮೃತರ ಇಚ್ಛೆಯಂತೆ ಪಾರ್ಥೀವ ಶರೀರವನ್ನು ನಗರದ ಬಸವೇಶ್ವರ ವೈದ್ಯಕೀಯ ಕಾಲೇಜು ಆಸ್ಪತ್ರೆಗೆ ದಾನ ನೀಡಲಾಯಿತು. ಪತ್ರಿಕೋದ್ಯಮ ಹಾಗೂ ಕಾನೂನು ಪದವಿ ಪಡೆದಿದ್ದ ಚನ್ನಬಸವಯ್ಯ ಆಕಾಶವಾಣಿ, ಡಿಡಿ ವಾಹಿನಿ ವರದಿಗಾರರಾಗಿ ಕೆಲಸ ಮಾಡುತ್ತಿದ್ದರು. ಅನಾರೋಗ್ಯದಿಂದಾಗಿ ಮೇ.28 ಮಧ್ಯಾಹ್ನ ನಗರದ ಖಾಸಗಿ ಆಸ್ಪತ್ರೆಗೆ ದಾಖಲಾಗಿದ್ದರು. ಆದರೆ, ಚಿಕಿತ್ಸೆ ಫಲಿಸದೆ ಗುರುವಾರ ಬೆಳಗ್ಗೆ ನಿಧನ ಹೊಂದಿದರು. ಮೃತರು ತಾಯಿ, ಪತ್ನಿ, ಸಹೋದರ ಸೇರಿದಂತೆ ಅನೇಕ ಬಂಧುಗಳನ್ನು ಅಗಲಿದ್ದಾರೆ.ನಗರದ ಪತ್ರಿಕಾ ಭವನದಲ್ಲಿ ಮೃತ ಚನ್ನಬಸವಯ್ಯ ಅವರ ಅಗಲಿಕೆ ಹಿನ್ನೆಲೆಯಲ್ಲಿ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದಿಂದ ಸಂತಾಪ ಸಭೆ ನಡೆಯಿತು.ವಾರ್ತಾಧಿಕಾರಿ ಬಿ.ವಿ.ತುಕಾರಾಂರಾವ್ ಮಾತನಾಡಿ, ಚನ್ನಬಸಯ್ಯ ಅವರು ಸುದ್ದಿಗಳ ವಿಚಾರದಲ್ಲಿ ಎಂದೂ ಮೈ ಮರೆಯುತ್ತಿರಲಿಲ್ಲ ಎಂದು ಸ್ಮರಿಸಿದರು. ತಮ್ಮ ವೃತ್ತಿ ಬದುಕಿನ ಜೊತೆಗೆ ಬದುಕಿನಲ್ಲೂ ಸಾರ್ಥಕತೆ ಮೂಡುವ ಕೆಲಸ ಮಾಡಿರುವುದು ಅವರ ಸಾವಿನಲ್ಲಿ ಗೊತ್ತಾಗಿದೆ. ವೈದ್ಯಕೀಯ ವಿದ್ಯಾರ್ಥಿಗಳ ಅಧ್ಯಯನಕ್ಕೆ ಅನುಕೂಲವಾಗಲಿ ಎಂಬ ಉದ್ದೇಶದಿಂದ ದೇಹದಾನ ಮಾಡಿರುವುದು ಶ್ಲಾಘನೀಯ ಎಂದು ಹೇಳಿದರು.ಪತ್ರಕರ್ತರ ಸಂಘದ ಅಧ್ಯಕ್ಷ ದಿನೇಶ್ ಗೌಡಗೆರೆ ಮಾತನಾಡಿ, ಪತ್ರಕರ್ತರ ಸಂಘದ ಸದ್ಯರಾಗಿದ್ದ ಚನ್ನಬಸವಯ್ಯ ಅವರ ಅಗಲಿಕೆ ಎಲ್ಲರಿಗೂ ದುಃಖ ತಂದಿದೆ. ಅವರ ಕುಟುಂಬ ಹಾಗೂ ಸ್ನೇಹಿತರಿಗೆ ದುಃಖ ಭರಿಸುವ ಶಕ್ತಿ ನೀಡಲಿ ಎಂದರು.ಹಿರಿಯ ಪತ್ರಕರ್ತ ಶ.ಮಂಜುನಾಥ್ ಮಾತನಾಡಿ, ಕಾನೂನು ಪದವಿ ಪಡೆದು, ಪತ್ರಕೋದ್ಯಮಕ್ಕೂ ಬಂದ ಚನ್ನಬಸವಯ್ಯ ಆರಂಭದಲ್ಲಿ ಬಹಳ ನಿಷ್ಠುರವಾಗಿ ನಡೆದುಕೊಳ್ಳುತ್ತಿದ್ದರು. ಆದರೆ, ಕಳೆದ ಆರು ತಿಂಗಳಿಂದ ಎಲ್ಲರೊಂದಿಗೆ ಉತ್ತಮ ಒಡನಾಟ ಹೊಂದಿ ಮಾಗಿದಂತೆ ಕಂಡು ಬರುತ್ತಿದ್ದರು ಎಂದು ಸ್ಮರಿಸಿದರು. ನಗರದ ಪತ್ರಕರ್ತರು ಇದ್ದರು.

### ಜೂನ್ 01ರಂದು ಪ್ರತಿಭಾ ಪುರಸ್ಕಾರ

» ಚಿತ್ರದುರ್ಗ

ರಾಜ್ಯ ಸರ್ಕಾರಿ ನಿವೃತ್ತ ನೌಕರರ ಚಿತ್ರದುರ್ಗ ಜಿಲ್ಲಾ ಸಂಘ ವತಿಯಿಂದ ಜೂನ್ 01ರಂದು ಮಧ್ಯಾಹ್ನ 12ಕ್ಕೆ ಚಿತ್ರದುರ್ಗ ನಗರದ ಪಿಳ್ಳೆಕೇರನಹಳ್ಳಿ ರಸ್ತೆಯ ರಾಷ್ಟ್ರೀಯ ಹೆದ್ದಾರಿ 50ರ ಕನಕ ನಗರದ 5ನೇ ಕ್ರಾಸ್‌ನಲ್ಲಿರುವ ಸರ್ಕಾರಿ ನಿವೃತ್ತ ನೌಕರರ ಜಿಲ್ಲಾ ಸಂಘದ ಕಚೇರಿಯಲ್ಲಿ ಜಿಲ್ಲೆಯ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಮ್ಮಿಕೊಳ್ಳಲಾಗಿದೆ. ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಂ.ಆರ್. ಮಂಜುನಾಥ್ ಕಾರ್ಯಕ್ರಮ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಕಾಲೇಜು ಶಿಕ್ಷಣ ಇಲಾಖೆಯ ವಿಶ್ರಾಂತ ಪ್ರಾಧ್ಯಾಪಕರು ಹಾಗೂ ಆಡಳಿತಾಧಿಕಾರಿ ಡಾ.ಜಿ.ಎನ್.ಮಲ್ಲಿಕಾರ್ಜುನಪ್ಪ ಭಾಗವಹಿಸುವರು. ಜಿಲ್ಲೆಯಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 9481181569 ಗೆ ಸಂಪರ್ಕಿಸಬಹುದು ಎಂದು ರಾಜ್ಯ ಸರ್ಕಾರಿ ನಿವೃತ್ತ ನೌಕರರ ಜಿಲ್ಲಾ ಸಂಘದ ಅಧ್ಯಕ್ಷ ಬಿ.ಪಿ.ಪ್ರೇಮನಾಥ್ ತಿಳಿಸಿದ್ದಾರೆ.

### 409 ವಿದ್ಯಾರ್ಥಿಗಳು ಗೈರು

» ಚಳ್ಳಕೆರೆ

ಎಸ್‌ಎಸ್‌ಎಲ್‌ಸಿ ಪರೀಕ್ಷೆ–2ರ ಮರುಪರೀಕ್ಷೆ ಗುರುವಾರ ತಾಲ್ಲೂಕಿನ ಏಳು ಕೇಂದ್ರಗಳಲ್ಲಿ ನಡೆಯಿತು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದರು.

ಸಮಾಜವಿಜ್ಞಾನ ಪರೀಕ್ಷೆಗೆ ಒಟ್ಟು 1355 ವಿದ್ಯಾರ್ಥಿಗಳು ಅರ್ಹರಿದ್ದು ಅವುಗಳಲ್ಲಿ 409 ವಿದ್ಯಾರ್ಥಿಗಳು ಗೈರುಹಾಜರಾಗಿದ್ದು, 946 ವಿದ್ಯಾರ್ಥಿಗಳು ಮಾತ್ರ ಪರೀಕ್ಷೆ ಬರೆದಿರುತ್ತಾರೆ.

## ಮಕ್ಕಳಿಗೆ ಗುಲಾಬಿ ಹೂ, ಬಲೂನ್ ನೀಡಿ ಸ್ವಾಗತ

# ಜಿಲ್ಲೆಯಾದ್ಯಂತ ಶಾಲಾ ಪ್ರಾರಂಭೋತ್ಸವ

» ಚಿತ್ರದುರ್ಗ









ಜಿಲ್ಲೆಯಾದ್ಯಂತ ಏಕಕಾಲಕ್ಕೆ ಗುರುವಾರ ಶಾಲೆಗಳು ಆರಂಭವಾಗಿದ್ದು, ಮೊದಲ ದಿನವೇ ಮಕ್ಕಳು ಉತ್ಸಾಹದಿಂದ ಶಾಲೆಗಳತ್ತ ಹೆಜ್ಜೆ ಹಾಕಿದರು. ಹೊಸ ಹುರುಪಿನೊಂದಿಗೆ ತರಗತಿಗೆ ಹಾಜರಾದರು.

ಶಾಲಾ ಪ್ರಾರಂಭೋತ್ಸವದ ಅಂಗವಾಗಿ ಶಾಲೆಗಳಲ್ಲಿ ತಳಿರು ತೋರಣ ಕಟ್ಟುವ ಮೂಲಕ ಶಿಕ್ಷಕರು ಮಕ್ಕಳನ್ನು ಸಂಭ್ರಮದಿಂದ ಬರ ಮಾಡಿಕೊಂಡರು. ಎತ್ತಿನಗಾಡಿಯಲ್ಲಿ ಮೆರವಣಿಗೆ, ಗುಲಾಬಿ ಹೂ, ಸಮವಸ್ತ್ರ ವಿತರಣೆ, ಪುಠ್ಯಪುಸ್ತಕ ವಿತರಣೆ ಸೇರಿದಂತೆ ಹೀಗೆ ವಿವಿಧ ಬಗೆಯಲ್ಲಿ ಮಕ್ಕಳನ್ನು ಸ್ವಾಗತಿಸಲಾಯಿತು.

ಶಿಕ್ಷಣದ ಶಕ್ತಿಯಿಂದ ಜ್ಞಾನದ ಬೆಳಕು ಹೆಚ್ಚಾಗಲಿ: ಶಿಕ್ಷಣವೇ ಶಕ್ತಿ, ಶಿಕ್ಷಣ ಕಲಿತ ವ್ಯಕ್ತಿ ತನ್ನ ಜೀವನವನ್ನು ಉತ್ತಮವಾಗಿ ನಿರ್ವಹಿಸಿ, ಸಮಾಜಕ್ಕೆ ಉತ್ತಮ ಕೊಡುಗೆಗಳನ್ನು ನೀಡುವರು. ಶಾಲೆಗಳು ಶಿಕ್ಷಣ ನೀಡುವ ಕೇಂದ್ರಗಳಾಗಿದ್ದು, ಅರ್ಹ ವಯಸ್ಸಿನ ಮಕ್ಕಳನ್ನು ಶಾಲೆಗೆ ಸೇರಿಸಿ, ನಿಯಮಿತವಾಗಿ ಶಾಲೆಗೆ ಕಳುಹಿಸಬೇಕು ಎಂದು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ.ಆರ್.ಮಂಜುನಾಥ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ಮೆದೇಹಳ್ಳಿ ಗ್ರಾಮಪಂಚಾಯಿತಿ ವ್ಯಾಪ್ತಿಯ ಉನ್ನತೀಕರಿಸಿದ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 2025–26ನೇ ಸಾಲಿನ "ಶಾಲಾ ಪ್ರಾರಂಭೋತ್ಸವ" ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮಕ್ಕಳಿಗೆ ಉಚಿತ ಸಮವಸ್ತ್ರ, ಉಚಿತ ಪಠ್ಯಪುಸ್ತಕ, ಸ್ಕಾಲರ್‌ಶಿಫ್, ಶೂ ಸಾಕ್ಸ್, ಬಿಸಿಯೂಟವನ್ನು ನೀಡಲಾಗುತ್ತಿದ್ದು, ಇದರ ಪ್ರಯೋಜನ ಪಡೆಯಬೇಕೆಂದು ತಿಳಿಸಿದರು.ಶಾಲಾ ಪ್ರಾರಂಭೋತ್ಸವದ ಅಂಗವಾಗಿ ಸಿಂಗಾರಗೊಂಡ ಎತ್ತಿನಗಾಡಿಯಲ್ಲಿ ಶಾಲಾ ಮಕ್ಕಳ ಮೆರವಣಿಗೆ ನಡೆಸಿ, ಶಾಲೆಯ ಆವರಣಕ್ಕೆ ಪ್ರವೇಶಿಸುತ್ತಿದ್ದಂತೆ ಶಿಕ್ಷಕರು ಪುಷ್ಪಾರ್ಚನೆ ಮಾಡಿ, ಹೂವು, ಬಲೂನ್ ನೀಡಿ, ಶೈಕ್ಷಣಿಕ ವರ್ಷಕ್ಕೆ ಸ್ವಾಗತಿಸಿದರು. 1ನೇ ತರಗತಿಗೆ 12 ವಿದ್ಯಾರ್ಥಿಗಳನ್ನು ದಾಖಲು ಮಾಡಿಕೊಳ್ಳುವುದರ ಮೂಲಕ ದಾಖಲಾತಿ ಪ್ರಕ್ರಿಯೆಗೆ ಚಾಲನೆ ನೀಡಲಾಯಿತು. ದಾಖಲಾದ ವಿದ್ಯಾರ್ಥಿಗಳಿಗೆ ಉಚಿತ ಪಠ್ಯಪುಸ್ತಕ, ಸಮವಸ್ತ್ರ ನೀಡಲಾಯಿತು.

ಮೇದೆಹಳ್ಳಿ ಗ್ರಾಮ ಪಂಚಾಯಿತಿಯ ಅಧ್ಯಕ್ಷೆ ಕಾವ್ಯ ವಿಜಯಕುಮಾರ್ ಮಾತನಾಡಿ, ಶಿಕ್ಷಣ ಕಲಿತ ವ್ಯಕ್ತಿ ಮುಂದಿನ ಜೀವನದಲ್ಲಿ ಯಶಸ್ಸನ್ನು ಗಳಿಸಲು ಸಾಧ್ಯವಾಗುವುದು. ಗ್ರಾಮದ ಎಲ್ಲಾ ಅರ್ಹ ಮಕ್ಕಳು ಶಾಲೆಗೆ ದಾಖಲಾಗಿ ಉತ್ತಮ ವ್ಯಕ್ತಿಗಳಾಗಬೇಕು ಎಂದು ಶುಭ ಹಾರೈಸಿದರು. ಶಾಲಾ ಮಕ್ಕಳಿಗೆ ಅಗತ್ಯವಾದ ಸೌಲಭ್ಯಗಳನ್ನು ಗ್ರಾಮಪಂಚಾಯಿತಿ ವತಿಯಿಂದ ನೀಡುವುದಾಗಿ ತಿಳಿಸಿದರು.

ಮೆದೇಹಳ್ಳಿ ಗ್ರಾಮಪಂಚಾಯಿತಿ ಉಪಾಧ್ಯಕ್ಷೆ ಲೀಲಾವತಿ ಶಿವಮೂರ್ತಿ ಮಾತನಾಡಿ, ಮಕ್ಕಳು ಶಿಕ್ಷಣವನ್ನು ಕಲಿತು ಉತ್ತಮ ಪ್ರಜೆಗಳಾಗಬೇಕು ಎಂದು ತಿಳಿಸಿದರು. ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಪಾತಣ್ಣ ಮಾತನಾಡಿ, ಮಕ್ಕಳ ಗ್ರಾಮಸಭೆಯಲ್ಲಿ ಮಕ್ಕಳು ತಿಳಿಸಿದ ಪ್ರಮುಖ ಅಂಶಗಳನ್ನು ಶೇ. 100 ರಷ್ಟು ಈಡೇರಿಸುವುದಾಗಿ ತಿಳಿಸಿದರು.

ಗ್ರಾಮದ ವಿಜಯಕುಮಾರ್ ಮಾತನಾಡಿ, ಶಾಲಾ ಮಕ್ಕಳಿಗೆ ಅಗತ್ಯವಾದ ಬಿಸಿಯೂಟ ಮಾಡಲು ಸೂಕ್ತ ವ್ಯವಸ್ಥೆ ಮಾಡಿಕೊಡಲು ಮನವಿ ಮಾಡಿದರು.

ಇದೇ ಸಂದರ್ಭದಲ್ಲಿ ಮೆದೇಹಳ್ಳಿ ಗ್ರಾಮಪಂಚಾಯಿತಿ ವತಿಯಿಂದ 8ನೇ ತರಗತಿಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ "ಸೋಲಾರ್ ಲ್ಯಾಂಪ್"ನ್ನು ವಿತರಿಸಲಾಯಿತು.

2024–25ನೇ ಸಾಲಿನಲ್ಲಿ 8ನೇ ತರಗತಿ ಮಕ್ಕಳಿಗೆ ಜರುಗಿದ ಎನ್.ಎಂ.ಎಂ.ಎಸ್. ಪರೀಕ್ಷೆಯಲ್ಲಿ ಶಾಲೆಯ 06 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು, ಜಿಲ್ಲೆಯಲ್ಲೆ ಅತಿಹೆಚ್ಚು ವಿದ್ಯಾರ್ಥಿಗಳನ್ನು ಉತ್ತೀರ್ಣ ಮಾಡಿದ ಸಾಧನೆ ಮಾಡಿದ್ದು, ವಿದ್ಯಾರ್ಥಿಗಳಿಗೆ ಹಾಗೂ ಶಿಕ್ಷಕಿ ಅನಿತಾರವರಿಗೆ ಸನ್ಮಾನ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಶಿಕ್ಷಣ ಇಲಾಖೆ ಉಪನಿರ್ದೇಶಕರ ಕಚೇರಿಯ ಶಿಕ್ಷಣಾಧಿಕಾರಿ ಸಿದ್ದಪ್ಪ,ಚಿತ್ರದುರ್ಗ ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿ ಎಸ್.ನಾಗಭೂಷಣ್, ಕ್ಷೇತ್ರ ಸಮನ್ವಯಾಧಿಕಾರಿ ಇ.ಸಂಪತ್ ಕುಮಾರ್, ಎಸ್.ಡಿ.ಎಂ.ಸಿ.ಅಧ್ಯಕ್ಷೆ ಶ್ವೇತಾ ಹಾಗೂ ಸದಸ್ಯರಾದ ದುಗ್ಗಣ್ಣ, ಶಿವಮೂರ್ತಪ್ಪ, ನಿಂಗಣ್ಣ, ಧನ್ಯಕುಮಾರ್, ಪ್ರಿಯ ದರ್ಶಿನಿ, ಬಸವರಾಜು, ಲಕ್ಷ್ಮಿದೇವಿ ಶ್ರೀನಿವಾಸ್, ಸುಶೀಲಮ್ಮ, ಶಶಿಕಲಾ, ಸುಲೋಚನ, ಎಂ.ಸಿ.ಶಂಕರ್, ಸಿಆರ್‌ಪಿಗಳಾದ ಎಂ.ಎಲ್.ತಿಮ್ಮರಾಜು, ಅಜಯ್ ಕೋಟೆ, ಶಾಲೆಯ ಮುಖ್ಯ ಶಿಕ್ಷಕ ಜಿ.ಎನ್.ಅಜ್ಜಪ್ಪ ಸೇರಿದಂತೆ ಮತ್ತಿತರರು ಇದ್ದರು.

## ಪ್ರಮುಖ ಸುದ್ದಿ

## ಶಾಲಾ ಕೊಠಡಿಗಳ ನಿರ್ಮಾಣಕ್ಕೆ ಈ ಬಾರಿ 725 ಕೋಟಿ ಹಣ ಕೊಟ್ಟಿದ್ದೇವೆ: ಸಿ.ಎಂ

# ಸರ್ಕಾರಿ ಶಾಲೆಗಳಲ್ಲೂ ಅತ್ಯುತ್ತಮ ಶಿಕ್ಷಣ ನಮ್ಮ ಗುರಿ

### ಪ್ರತಿಭೆ ಯಾರ ಸ್ವತ್ತೂ ಅಲ್ಲ: ಅವಕಾಶ ಸಿಕ್ಕರೆ ಎಲ್ಲರ ಪ್ರತಿಭೆಯೂ ಹೊರಗೆ ಬರುತ್ತದೆ: ಮುಖ್ಯಮಂತ್ರಿ ಸಿದ್ದರಾಮಯ್ಯ

### ಹಣಕಾಸು ಮಂತ್ರಿಯಾಗಿದ್ದಾಗ ನಾನು 1 ಲಕ್ಷ ಶಿಕ್ಷಕರನ್ನು ನೇಮಕ ಮಾಡಲು ಹಣಕಾಸು ಅನುಮೋದನೆ ನೀಡಿದ್ದೆ

» ಬೆಂಗಳೂರು






ಪ್ರತಿಭೆ ಯಾರ ಸ್ವತ್ತೂ ಅಲ್ಲ. ಅವಕಾಶ ಸಿಕ್ಕರೆ ಎಲ್ಲರ ಪ್ರತಿಭೆಯೂ ಹೊರಗೆ ಬರುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನುಡಿದರು.

ಶಾಲಾ ಶೈಕ್ಷಣಿಕ ವರ್ಷದ ಪುನರಾರಂಭದ ಪ್ರಯುಕ್ತ ಆಡುಗೋಡಿಯ ಕರ್ನಾಟಕ ಸರ್ಕಾರಿ ಕನ್ನಡ ಶಾಲೆಯಲ್ಲಿ ಶಿಕ್ಷಣ ಇಲಾಖೆ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಿ, ಶಾಲಾ ಕೊಠಡಿಗಳ ಪರಿಶೀಲನೆ ನಡೆಸಿ ಬಳಿಕ ವೇದಿಕೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಸರ್ವರಿಗೂ ಶಿಕ್ಷಣ ಕೊಡುವುದು ಸರ್ಕಾರದ ಜವಾಬ್ದಾರಿ. ಶಿಕ್ಷಣ ಕೇವಲ ಜ್ಞಾನ ಕೊಡುವುದಿಲ್ಲ, ವ್ಯಕ್ತಿತ್ವವನ್ನು ರೂಪಿಸುತ್ತದೆ. ಪ್ರತಿಯೊಬ್ಬರೂ ಶಿಕ್ಷಣ ಪಡೆದುಕೊಳ್ಳಲೇಬೇಕು. ಇದರಿಂದ ಸ್ವಾಭಿಮಾನ ಬೆಳೆದು ಸಮಾಜದ ಆಸ್ತಿಯಾಗುತ್ತೇವೆ ಎಂದರು.

ಡಾ.ಬಾಬಾ ಸಾಹೇಬರು ದೇಶ ಕಂಡ ಮಹಾನ್ ವಿದ್ವಾಂಸರಲ್ಲಿ ಒಬ್ಬರು. ಪ್ರತಿಭೆ ಯಾರ ಸ್ವತ್ತೂ ಅಲ್ಲ. ಅವಕಾಶ ಸಿಕ್ಕರೆ ಎಲ್ಲರ ಒಳಗಿರುವ ಪ್ರತಿಭೆಯೂ ಹೊರಗೆ ಬರುತ್ತದೆ. ಅಂಬೇಡ್ಕರ್ ಅವರು ಕೊಟ್ಟಂತಹ ಸಂವಿಧಾನವನ್ನೂ ಎಲ್ಲರೂ ಪಾಲಿಸಬೇಕು ಎಂದರು.

ಜಾತಿ, ವರ್ಗ ಮುಕ್ತ ಸಮ ಸಮಾಜ ನಿರ್ಮಾಣ ಆಗಬೇಕು ಎನ್ನುವುದು ಅಂಬೇಡ್ಕರ್ ಅವರ ಆಶಯವಾಗಿತ್ತು ಎಂದರು.

1992–93 ರಲ್ಲಿ ನಾನು ಹಣಕಾಸು ಮಂತ್ರಿಯಾಗಿದ್ದಾಗ ಒಂದು ಲಕ್ಷ ಶಿಕ್ಷಕರನ್ನು ನೇಮಕ ಮಾಡಲು ಹಣಕಾಸು ಅನುಮೋದನೆ ನೀಡಿದ್ದೆ ಎಂದು ಸ್ಮರಿಸಿದರು.

ಮಕ್ಕಳಿಗೆ ಉತ್ತಮ ಪೌಷ್ಠಿಕಾಂಶ ಸಿಕ್ಕರೆ ಮಾತ್ರ ಉತ್ತಮ ವಿದ್ಯಾರ್ಥಿಗಳಾಗಿ ಓದಲು ಸಾಧ್ಯ. ಈ ಕಾರಣಕ್ಕೇ ನಾವು ಮಕ್ಕಳಿಗೆ ಮೊಟ್ಟೆ, ಬಾಳೆಹಣ್ಣು, ಚಿಕ್ಕಿ, ಹಾಲು ಕೊಡುತ್ತಿದ್ದೇವೆ. ಇದರ ಜೊತೆಗೆ ಪಠ್ಯ, ಸಮವಸ್ತ್ರ, ಶೂ, ಸಾಕ್ಸ್, ಪುಸ್ತಕಗಳನ್ನೂ ಸರ್ಕಾರದಿಂದಲೇ ಕೊಡುತ್ತಿದ್ದೇವೆ ಎಂದರು.

**ಹೆಚ್ಚೆಚ್ಚು ಭಾಷೆ ಕಲಿಯಿರಿ: ಕನ್ನಡದಲ್ಲಿ ಮುಂದಿರಿ:** ಮಕ್ಕಳು ಎಷ್ಟು ಭಾಷೆ ಕಲಿತರೂ ಒಳ್ಳೆಯದೆ. ಹೆಚ್ಚೆಚ್ಚು ಭಾಷೆ ಕಲಿತು ಕನ್ನಡದಲ್ಲಿ ಮುಂದಿರಿ. ಕನ್ನಡದಲ್ಲಿ ಕಲಿತರೆ ಮಕ್ಕಳು ಪ್ರತಿಭಾವಂತರಾಗುವುದಿಲ್ಲ ಎನ್ನುವುದು ತಪ್ಪು. ವೈಜ್ಞಾನಿಕ ಶಿಕ್ಷಣ ಪಡೆದು, ವೈಜ್ಞಾನಿಕ ಗುಣಮಟ್ಟ ಬೆಳೆಸಿಕೊಂಡರೆ ಮಕ್ಕಳು ಉತ್ತಮ ಪ್ರತಿಭಾವಂತರಾದಂತೆ. ಆದ್ದರಿಂದ ಸರ್ಕಾರಿ ಶಾಲೆಗಳ ಹಾಜರಾತಿ ಹೆಚ್ಚಾಗಬೇಕು ಎಂದು ಒತ್ತಿ ಹೇಳಿದರು.

ಶಾಲಾ ಕೊಠಡಿಗಳ ನಿರ್ಮಾಣಕ್ಕೆ ಈ ಬಾರಿಯೂ 725 ಕೋಟಿ ಹಣ ಕೊಟ್ಟಿದ್ದೇವೆ. ಕಳೆದ ವರ್ಷವೂ ಕೊಟ್ಟಿದ್ದೇವೆ. ಗುಣಮಟ್ಟದಲ್ಲಿ ಸರ್ಕಾರಿ ಶಾಲೆಗಳು ಹಿಂದುಳಿದಿಲ್ಲ ಎಂದರು.

ಗ್ರೇಸ್ ಮಾರ್ಕ್ಸ್ ಇಲ್ಲದೆ ಮಕ್ಕಳು ಉತ್ತಮ ಫಲಿತಾಂಶ ಪಡೆಯುವ ನಿಟ್ಟಿನಲ್ಲಿ ಶಿಕ್ಷಣ ಇಲಾಖೆ ಪ್ರಯತ್ನಿಸುತ್ತಿದೆ. ಎರಡನೇ ಮತ್ತು ಮೂರನೇ ಸಪ್ಲಿಮೆಂಟರಿ ಪರೀಕ್ಷೆಗಳಿಗೆ ಶುಲ್ಕ ಇರುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಸಚಿವ ರಾಮಲಿಂಗಾರೆಡ್ಡಿಯವರ ಕ್ಷೇತ್ರದಲ್ಲಿ ಸರ್ಕಾರಿ ಶಾಲೆಗಳು ಉತ್ತಮ ಗುಣಮಟ್ಟ ಕಾಯ್ದುಕೊಂಡಿವೆ. ಇದೇ ಗುಣಮಟ್ಟ ಇಡೀ ರಾಜ್ಯಾದ್ಯಂತ ಆಗಬೇಕು ಎಂದು ಕರೆ ನೀಡಿದರು.

## ಫಾಸ್ಟ್ ನ್ಯೂಸ್

### ಕಮಲ್ ಹಾಸನ್ ಕನ್ನಡಿಗರ ಬೇಷರತ್ ಕ್ಷಮೆಯಾಚಿಸ ಬೇಕು: ಖಾಲಿದ್ ಅಹ್ಮದ್

» ದಾವಣಗೆರೆ

"ತಮಿಳು ಕನ್ನಡಕ್ಕೆ ಜನ್ಮ ನೀಡಿತು" ಎಂಬ ಹೇಳಿಕೆ ನೀಡಿರುವ ನಟ ಕಮಲ ಹಾಸನ್ ಕೂಡಲೇ ಕನ್ನಡಿಗರ ಕ್ಷಮೆಯಾಚಿಸಬೇಕು ಎಂದು ಅಖಿಲ ಭಾರತ ರಾಷ್ಟ್ರೀಯ ಯುವ ಕಾಂಗ್ರೆಸ್ ಕಾರ್ಯದರ್ಶಿ ಸೈಯದ್ ಖಾಲಿದ್ ಅಹ್ಮದ್ ಒತ್ತಾಯಿಸಿದ್ದಾರೆ. ಈ ಸಂಬಂಧ ಪತ್ರಿಕಾ ಹೇಳಿಕೆ ನೀಡಿರುವ ಅವರು, ಕನ್ನಡಿಗರ ಸ್ವಾಭಿಮಾನ ಕೆರಳಿಸುವಂಥ ಹೇಳಿಕೆ ನೀಡಿರುವುದು ಕಮಲ್ ಹಾಸನ್ ಅವರಿಗೆ ಶೋಭೆ ತರುವಂಥದ್ದಲ್ಲ. ಹಿರಿಯ ನಟನಾಗಿ ಈ ರೀತಿಯಾಗಿ ಹೇಳಿಕೆ ನೀಡುವುದು ಖಂಡನೀಯ. ಯಾವ ಕನ್ನಡಿಗರೂ ಕಮಲ್ ಹಾಸನ್ ಹೇಳಿಕೆ ಒಪ್ಪುವುದಿಲ್ಲ. ಬೇಷರತ್ ಆಗಿ ಕ್ಷಮೆಯಾಚಿಸದಿದ್ದರೆ ಕನ್ನಡಿಗರ ಆಕ್ರೋಶ ಕಡಿಮೆಯಾಗದು. ಕೂಡಲೇ ಹೇಳಿಕೆ ವಾಪಸ್ ಪಡೆದು ಬಹಿರಂಗವಾಗಿ ಕ್ಷಮೆಯಾಚಿಸಲೇಬೇಕು ಎಂದು ಒತ್ತಾಯಿಸಿದ್ದಾರೆ. ಕನ್ನಡ ನಾಡು, ಭಾಷೆ, ಜಲ, ಸ್ವಾಭಿಮಾನದ ವಿಚಾರ ಬಂದಾಗ ಯಾವ ಕನ್ನಡಿಗನೂ ಸುಮ್ಮನೆ ಕೂರುವುದಿಲ್ಲ. ಇತಿಹಾಸ ತಿಳಿದುಕೊಂಡು ಮಾತನಾಡಬೇಕೇ ವಿನಾಃ ಬಾಯಿ ಚಪಲಕ್ಕಾಗಿ ಮಾತನಾಡಬಾರದು ಎಂಬ ಕನಿಷ್ಠ ಪ್ರಜ್ಞೆಯೂ ಹಿರಿಯ ನಟನಿಗಿಲ್ಲ. ಕಮಲ್ ಹಾಸನ್ ಅವರ ಈ ನಡವಳಿಕೆಯಿಂದ ಅವರ ಅಭಿಮಾನಿಗಳಿಗೂ ಬೇಸರ ಆಗಿದೆ. ಥಗ್ ಲೈಫ್ ಚಿತ್ರವನ್ನು ಕನ್ನಡಿಗರು ವೀಕ್ಷಿಸದೇ ತಕ್ಕ ಪಾಠ ಕಲಿಸಬೇಕು ಎಂದು ಮನವಿ ಮಾಡಿದ್ದಾರೆ. ಸಿಎಂ ಸಿದ್ದರಾಮಯ್ಯ ಅವರು ಈಗಾಗಲೇ ಪ್ರತಿಕ್ರಿಯೆ ನೀಡಿದ್ದು, ಕನ್ನಡದ ಅಸ್ಮಿತೆ ವಿಚಾರಕ್ಕೆ ಧಕ್ಕೆ ಬಂದರೆ ಸಹಿಸಲು ಆಗದು. ಇತಿಹಾಸ ಪ್ರಜ್ಞೆ ಇಲ್ಲದೇ ಮಾತನಾಡಿರುವುದು ಸರಿಯಲ್ಲ ಎಂದಿದ್ದಾರೆ. ರಾಜ್ಯ ಸರ್ಕಾರವೂ ಸಹ ಕಮಲ್ ಹಾಸನ್ ಉದ್ದಟತನದ ವರ್ತನೆಗೆ ಆಕ್ರೋಶ ವ್ಯಕ್ತಪಡಿಸಿದೆ. ಮೊಂಡಾಟ ಬಿಡಬೇಕು. ಇಷ್ಟೆಲ್ಲಾ ವಿವಾದ ಆದರೂ ಕ್ಷಮೆ ಕೇಳುವುದಿಲ್ಲ ಎಂದಿರುವ ಕಮಲ್ ಹಾಸನ್ ವರ್ತನೆ ನೋಡಿದರೆ ದುರಂಹಕಾರದ ಪರಮಾವಧಿಯಾಗಿದೆ ಎಂದು ಸೈಯದ್ ಖಾಲಿದ್ ಅಹ್ಮದ್ ಆಕ್ರೋಶ ವ್ಯಕ್ತಪಡಿಸಿದ್ದಾರೆ.

### ಮೇ31ರಂದು ವಿಶ್ವ ತಂಬಾಕು ರಹಿತ ದಿನ

» ಚಿತ್ರದುರ್ಗ

ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ ಇದೇ ಮೇ31ರಂದು ಬೆಳಿಗ್ಗೆ 9ಕ್ಕೆ ನಗರದ ಜಿಲ್ಲಾಸ್ಪತ್ರೆ ಆವರಣದಲ್ಲಿ ವಿಶ್ವ ತಂಬಾಕು ರಹಿತ ದಿನದ ಪ್ರಯುಕ್ತ ಜಾಥಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡುವರು. ಜಾಥಾ ಕಾರ್ಯಕ್ರಮವು ಜಿಲ್ಲಾ ಆಸ್ಪತ್ರೆಯಿಂದ ಜೋಗಿಮಟ್ಟಿ ರಸ್ತೆ ಮಾರ್ಗವಾಗಿ ಜಿಲ್ಲಾ ಪಂಚಾಯತ್‌ವರೆಗೂ ನಡೆಯಲಿದೆ. ವಿಶ್ವ ತಂಬಾಕು ರಹಿತ ದಿನದ ಪ್ರಯುಕ್ತ ವೇದಿಕೆ ಕಾರ್ಯಕ್ರಮವನ್ನು ಬೆಳಿಗ್ಗೆ 11ಕ್ಕೆ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದು, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಎಂ.ವಿಜಯ್ ಉದ್ಘಾಟಿಸುವರು. ಜಿಲ್ಲಾ ಪಂಚಾಯಿತಿ ಸಿಇಒ ಎಸ್.ಜೆ.ಸೋಮಶೇಖರ್, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ, ಮಲ್ನಾಡ್ ಕ್ಯಾನ್ಸರ್ ಆಸ್ಪತ್ರೆಯ ಮುಖ್ಯ ಆಡಳಿತಾಧಿಕಾರಿ ಸೇರಿದಂತೆ ಮತ್ತಿತರರು ಭಾಗವಹಿಸುವರು ಎಂದು ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ತಂಬಾಕು ನಿಯಂತ್ರಣಾಧಿಕಾರಿಗಳು ತಿಳಿಸಿದ್ದಾರೆ.

### ವಿದ್ಯಾರ್ಥಿ ನಿಲಯ ಪ್ರವೇಶಕ್ಕೆ ಅರ್ಜಿ ಆಹ್ವಾನ

» ಚಿತ್ರದುರ್ಗ

2025–26ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ಚಳ್ಳಕೆರೆ ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯ ಡಾ.ಬಿ.ಆರ್.ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಜೂನ್ 30 ಅರ್ಜಿ ಸಲ್ಲಿಸಲು ಕೊನೆಯ ದಿನ. ಅರ್ಜಿ ಸಲ್ಲಿಸಲು ವಿದ್ಯಾರ್ಥಿಯ ಆಧಾರ್ ಕಾರ್ಡ್, ತಂದೆ–ತಾಯಿಯ ಆಧಾರ್ ಕಾರ್ಡ್, ವಿದ್ಯಾರ್ಥಿಯ ಎಸ್‌ಎಟಿಎಸ್ ನಂಬರ್, ಮೊಬೈಲ್ ನಂಬರ್, ಜಾತಿ ಮತ್ತು ಆದಾಯ ಪ್ರಮಾಣ ಪತ್ರ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸುವುದು. ಕೌನ್ಸಿಲಿಂಗ್ ಮೂಲಕ ಆಯ್ಕೆ ಪ್ರಕ್ರಿಯೆ ನಡೆಯುವುದು. ಅರ್ಜಿ ಸಲ್ಲಿಸಿದ ಒಂದು ಪ್ರತಿ ನಿಲಯದ ಮೇಲ್ವಿಚಾರಕರಿಗೆ ಸಲ್ಲಿಸಬೇಕು ಎಂದು ಚಳ್ಳಕೆರೆ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರು (ಗ್ರೇಡ್–1) ತಿಳಿಸಿದ್ದಾರೆ.

### ಶಾಲಾ ಪ್ರಾರಂಬೋತ್ಸವ

» ದಾವಣಗೆರೆ

ಶಾಲಾ ಶಿಕ್ಷಣ ಇಲಾಖೆ ಮಾರ್ಗಸೂಚಿಯನ್ವಯ ಮೇ.29 ರಂದು ಶಾಲಾ ಮುಖ್ಯ ಶಿಕ್ಷಕರು ಹಾಗೂ ಸಹ ಶಿಕ್ಷಕರು ಶಾಲೆಗಳಿಗೆ ಹಾಜರಾಗಿ ಶಾಲಾ ಪ್ರಾರಂಭೋತ್ಸವವನ್ನು ಕೈಗೊಳ್ಳಲು ಅಗತ್ಯ ಪೂರ್ವ ಸಿದ್ಧತೆಗಳನ್ನು ಮಾಡಿಕೊಂಡು ಮೇ.30 ರಿಂದ ಶಾಲಾ ಮಕ್ಕಳ ಪ್ರವೇಶ, ದಾಖಲಾತಿ ಪ್ರಕ್ರಿಯೆ ಹಾಗೂ ಪ್ರಾರಂಭೋತ್ಸವವನ್ನು ಕೈಗೊಳ್ಳಬೇಕೆಂದು ಡಿಡಿಪಿಐ ಕೊಟ್ರೇಶ್ ತಿಳಿಸಿದ್ದಾರೆ.

### ಪ್ರಾದೇಶಿಕ ಆಯುಕ್ತ ಅಮ್ಲಾನ್ ಆದಿತ್ಯ ಬಿಸ್ವಾಸ್ ಸೂಚನೆ

# ಕಂದಾಯ ಭೂಮಿ ಒತ್ತುವರಿ ತೆರವಿಗೆ ಪ್ರಯತ್ನಿಸಿ

» ಚಿತ್ರದುರ್ಗ

ಲ್ಯಾಂಡ್ ಬೀಟ್ ನಡೆಸುವ ಮೂಲಕ ಕಂದಾಯ ಇಲಾಖೆಯ ಭೂಮಿ ಸರ್ವೇ ನಡೆಸಿ, ಅನಧಿಕೃತ ಭೂಮಿ ಒತ್ತುವರಿ ತೆರವುಗೊಳಿಸಲು ಜಿಲ್ಲಾಧಿಕಾರಿಗಳು ಪ್ರಯತ್ನಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಹಾಗೂ ಪ್ರಾದೇಶಿಕ ಆಯುಕ್ತ ಅಮ್ಲಾನ್ ಆದಿತ್ಯ ಬಿಸ್ವಾಸ್ ಸೂಚನೆ ನೀಡಿದರು.

ಬೆಂಗಳೂರು ವಿಭಾಗದ ಜಿಲ್ಲೆಗಳ ಜಿಲ್ಲಾಧಿಕಾರಿಗಳೊಂದಿಗೆ ಗುರುವಾರ ಕಂದಾಯ ಇಲಾಖೆ ವಿಷಯಗಳ ಕುರಿತು ವಿಡಿಯೋ ಕಾನ್ಫರೆನ್ಸ್ ಮೂಲಕ ಸಭೆ ನಡೆಸಿ ಅವರು ಮಾತನಾಡಿದರು.

ವಿವಿಧ ಇಲಾಖೆಗಳ ಕಚೇರಿ ನಿರ್ಮಾಣಕ್ಕೆ ಕಂದಾಯ ಭೂಮಿ ಮಂಜೂರು ಮಾಡುವಂತೆ ಕೋರಿ ಸಲ್ಲಿಸಲಾದ ಸಾಕಷ್ಟು ಅರ್ಜಿಗಳು ಜಿಲ್ಲಾಧಿಕಾರಿಗಳ ಮುಂದಿವೆ. ಪೋಲೀಸ್, ಶಿಕ್ಷಣ, ಆರೋಗ್ಯ ಇಲಾಖೆಗಳಿಗೆ ನಗರಕ್ಕೆ ಹತ್ತಿರದಲ್ಲಿಯೇ ಸ್ಥಳಗಳನ್ನು ಮಂಜೂರು ಮಾಡಬೇಕು. ಜಿಲ್ಲಾಧಿಕಾರಿಗಳು ಭೂ ಒತ್ತುವರಿ ತೆರವು ಮಾಡಿ, ಅಗತ್ಯ ಇರುವ ಕಡೆ ಸಂಬಂಧಿಸಿದ ಇಲಾಖೆಗಳಿಗೆ ಭೂಮಿ ನೀಡಲು ಮುಂದಾಗಬೇಕು ಎಂದು ಪ್ರಾದೇಶಿಕ ಆಯುಕ್ತ ಅಮ್ಲಾನ್ ಆದಿತ್ಯ ಬಿಸ್ವಾಸ್ ಹೇಳಿದರು.



ಫಾರಂ 53 ಹಾಗೂ 57 ಅಡಿ ಉಳುಮೆ ಮಾಡುತ್ತಿರುವ ಹಾಗೂ ಜಮೀನು ಮಂಜೂರು ಮಾಡಲು ಕೋರಿರುವ ಅರ್ಜಿಗಳ ಅಂಕಿ ಅಂಶಗಳ ಮಾಹಿತಿಯನ್ನು ಜಿಲ್ಲಾಧಿಕಾರಿಗಳಿಂದ ಪಡೆದ ಅವರು, ಗೋಮಾಳದ ಜಾಗವನ್ನು ಸಾರ್ವಜನಿಕರ ಬಳಕೆಗೆ ಮಂಜೂರು ಮಾಡಬಹುದು. ಆದರೆ ಚಿತ್ರದುರ್ಗ ಜಿಲ್ಲೆಯಲ್ಲಿನ ಕಾವಲು ಭೂಮಿಯನ್ನು ಮಂಜೂರು ಮಾಡದಂತೆ ಸರ್ವೋಚ್ಚ ನ್ಯಾಯಾಲಯ ತಡೆ ನೀಡಿದೆ. ಇದರ ಜೊತೆಗೆ ಕರ್ನಾಟಕ ಕ್ರಿಕೆಟ್ ಕ್ಲಬ್ ಸೇರಿದಂತೆ ಖಾಸಗಿಯವರಿಗೆ ವಿವಿದ ಉದ್ದೇಶಗಳಿಗಾಗಿ ನೀಡಿದ ಭೂಮಿಯ ಬಳಕೆಯಾಗದೆ ಇದ್ದರೆ ಅಂತಹ ಕಂದಾಯ ಭೂಮಿಗಳ ವಿವರವನ್ನು ಜಿಲ್ಲಾಧಿಕಾರಿಗಳು ಪಟ್ಟಿ ಮಾಡಿ ಪ್ರಾದೇಶಿಕ ಕಚೇರಿಗೆ ಸಲ್ಲಿಸುವಂತೆ ಬಿಸ್ವಾಸ್ ಅವರು ನಿರ್ದೇಶನ ನೀಡಿದರು. ವಿವಿಧ ಜಿಲ್ಲೆಗಳಲ್ಲಿನ ಭೂ ಸ್ವಾಧೀನದ ಮಾಹಿತಿಯನ್ನು ಗಣಕೀಕರಣ ಮಾಡಲು ಹೊಸ ತಂತ್ರಾಂಶ ಅಭಿವೃದ್ಧಿ ಪಡಿಸಲು ಸರ್ಕಾರದಲ್ಲಿ ಚಿಂತನೆ ನಡೆಸಲಾಗಿದೆ ಎಂದರು.

ಚಿತ್ರದುರ್ಗ ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಮಾತನಾಡಿ, ಜಿಲ್ಲೆಯಲ್ಲಿ ಇದುವರೆಗೂ ಮಳೆಯಿಂದಾಗಿ 11 ಜಾನುವಾರುಗಳು ಮೃತಪಟ್ಟಿವೆ. 148 ಮನೆಗಳು ಹಾನಿಯಾಗಿವೆ.

ಸಂತ್ರಸ್ತರಿಗೆ ಪರಿಹಾರ ನೀಡಲು ಈಗಾಗಲೆ ಕ್ರಮ ವಹಿಸಲಾಗಿದೆ. ಜಿಲ್ಲೆಯಲ್ಲಿ ಶೇ.94% ಲ್ಯಾಂಡ್ ಬೀಟ್ ನಡೆಸಲಾಗಿದೆ. ಕಾವಲು ಪ್ರದೇಶಗಳ ಮ್ಯಾಪಿಂಗ್ ಮಾಡಲು ತಾಂತ್ರಿಕ ಅಡ್ಡಿ ಉಂಟಾಗಿತ್ತು, ಇದನ್ನು ಸರಿಪಡಿಸಿ ಲ್ಯಾಂಡ್ ಬೀಟ್ ಮುಂದುವರೆಸಲಾಗಿದೆ. ಫಾರಂ 53 ಹಾಗೂ 57 ಅಡಿ ಜಿಲ್ಲೆಯಲ್ಲಿ 76 ಸಾವಿರ ಅರ್ಜಿಗಳು ಸಲ್ಲಿಕೆಯಾಗಿವೆ ಎಂದು ಮಾಹಿತಿ ನೀಡಿದರು.

ವಿಡಿಯೋ ಕಾನ್ಫರೆನ್ಸ್ ನಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಬೆಂಗಳೂರು ಕಂದಾಯ ವಿಭಾಗದ ವಿವಿಧ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಸೇರಿದಂತೆ, ಕಂದಾಯ ಇಲಾಖೆ ಅಧಿಕಾರಿಗಳು ಭಾಗವಹಿಸಿದ್ದರು.

# ಮುಂದುವರಿದ ಪೌರ ನೌಕರರ ಮುಷ್ಕರ

» ಚಿತ್ರದುರ್ಗ

ಸೇವೆ ಖಾಯಂಗೊಳಿಸುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಪೌರ ಕಾರ್ಮಿಕರು ನಡೆಸುತ್ತಿರುವ ಮುಷ್ಕರ ಗುರುವಾರ ಮೂರನೆ ದಿನಕ್ಕೆ ಕಾಲಿಟ್ಟಿತು.

ನೀಲಕಂಠೇಶ್ವರಸ್ವಾಮಿ ದೇವಸ್ಥಾನದಿಂದ ಮೆರವಣಿಗೆ ಮೂಲಕ ಆಗಮಿಸಿದ ಪ್ರತಿಭಟನಾಕಾರರು ಸಂವಿಧಾನಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಸಲ್ಲಿಸಿ ನಂತರ ಒನಕೆ ಓಬವ್ವ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿದ್ದರಿಂದ ಸುಮಾರು ಎರಡು ಗಂಟೆಗಳಿಗೂ ಹೆಚ್ಚು ಕಾಲ ವಾಹನಗಳ ಸಂಚಾರ ಬಂದ್ ಆಗಿತ್ತು.

ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿದ ಪೌರ ಕಾರ್ಮಿಕರ ಸಂಘದ ಜಿಲ್ಲಾಧ್ಯಕ್ಷ ಡಿ.ದುರುಗೇಶಪ್ಪ ಪ್ರತಿನಿತ್ಯವೂ ಬೆಳಿಗ್ಗೆಯೇ ನಗರ ಸ್ವಚ್ಛತೆಯಲ್ಲಿ ತೊಡಗುವ ಪೌರ ಕಾರ್ಮಿಕರು ಒಂದು ದಿನ ಕೆಲಸ ಮಾಡದಿದ್ದರೆ ನಗರದಲ್ಲಿ ಎಂತಹ ಕ್ಲಿಷ್ಠಕರ ಪರಿಸ್ಥಿತಿ ನಿರ್ಮಾಣವಾಗಲಿದೆ ಎನ್ನುವುದನ್ನು ಊಹಿಸಿಕೊಳ್ಳಲು ಆಗುವುದಿಲ್ಲ. ಚರಂಡಿ ಸ್ವಚ್ಚಗೊಳಿಸುವುದರಿಂದ ಹಿಡಿದು ಶೌಚಾಲಯ ಗುಂಡಿಯನ್ನು ಶುಚಿಗೊಳಿಸುವವರು ಪೌರ ಕಾರ್ಮಿಕರು ಆದರೂ ಸರ್ಕಾರ ಕಡೆಗಣಿಸುತ್ತಿರುವುದು ಸರಿಯಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಪೌರ ಕಾರ್ಮಿಕರನ್ನು ಖಾಯಂಗೊಳಿಸಬೇಕು. ಹೊರ ಗುತ್ತಿಗೆ ರದ್ದುಪಡಿಸಿ ನೇರ ನೇಮಕಾತಿ ಮಾಡಿಕೊಳ್ಳಬೇಕು. ವಾಲ್‌ಮನ್‌ಗಳು, ನೀರಗಂಟಿಗಳು, ವಾಹನ ಚಾಲಕರು, ಪೌರ ಕಾರ್ಮಿಕರು ಜೀವನ ಭದ್ರತೆಯಿಲ್ಲದೆ ದುಡಿಯುತ್ತಿದ್ದಾರೆ. ಅದೇ ಒಬ್ಬ ಬಿಲ್ ಕಲೆಕ್ಟರ್ ಬಡ್ತಿ ಪಡೆದು ಮುಖ್ಯಾಧಿಕಾರಿಯಾಗಬಹುದು. ಪೌರ ಕಾರ್ಮಿಕರಿಗೆ ಯಾವ ಬಡ್ತಿಯೂ ಇಲ್ಲ. ಇದ್ಯಾವ ನ್ಯಾಯ ಎಂದು ಪ್ರಶ್ನಿಸಿದ ಡಿ.ದುರುಗೇಶಪ್ಪ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಪೌರ ಕಾರ್ಮಿಕರಿಗೂ ಕನಿಷ್ಟ ಗೌರವ ಕೊಡಬೇಕೆಂದು ಒತ್ತಾಯಿಸಿದರು.



ಪೌರ ಕಾರ್ಮಿಕರ ಮುಷ್ಕರದಲ್ಲಿ ಪಾಲ್ಗೊಂಡು ಬೆಂಬಲ ಸೂಚಿಸಿ ಮಾತನಾಡಿದ ನಗರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ಸೈಯದ್ ನಸ್ರುಲ್ಲಾ ರಾಜ್ಯ ಸರ್ಕಾರ ನಿರ್ಲಕ್ಷೆ ಮಾಡುವುದು ಬೇಡ. ಆದಷ್ಟು ಬೇಗನೆ ಪೌರ ಕಾರ್ಮಿಕರ ನ್ಯಾಯಯುತವಾದ ಬೇಡಿಕೆಗಳನ್ನು ಈಡೇರಿಸಬೇಕು. ಆರೋಗ್ಯ ಹದಗೆಡುವಂ ಕೆಲಸ ಮಾಡುವ ಪೌರ ಕಾರ್ಮಿಕರನ್ನು ಸರ್ಕಾರಿ ನೌಕರರೆಂದು ಪರಿಗಣಿಸಿ ಸರ್ಕಾರದಿಂದ ವೇತನ ಕೊಡಬೇಕು. ಗುತ್ತಿಗೆ, ಹೊರ ಗುತ್ತಿಗೆ ಬೇಡ. ಮೂರು ದಿನಗಳಿಂದ ಪೌರ ಕಾರ್ಮಿಕರು ಮುಷ್ಕರ ನಡೆಸುತ್ತಿರುವುದಕ್ಕೆ ನಗರದಲ್ಲಿ ಎಲ್ಲೆಂದರಲ್ಲಿ ಕಸದ ರಾಶಿಗಳು ಬಿದ್ದಿವೆ. ಸರ್ಕಾರ ಕೂಡಲೆ ಗಮನ ಕೊಡಬೇಕೆಂದು ಮನವಿ ಮಾಡಿದರು.

ನಗರ ಸ್ವಚ್ಚತೆಯಲ್ಲಿ ತೊಡಗುವ ಪೌರ ಕಾರ್ಮಿಕರಿಗೂ ಜ್ಯೋತಿ ಸಂಜೀವಿನಿ ಮತ್ತು ಆರೋಗ್ಯ ಸಂಜೀವಿನಿಯಂತ ಸ್ಕೀಂಗಳು ಸಿಗಬೇಕು. ಯಾವುದೆ ಕಾರಣಕ್ಕೂ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಪೌರ ಕಾರ್ಮಿಕರ ಮುಷ್ಕರವನ್ನು ಹಗುರವಾಗಿ ತೆಗೆದುಕೊಳ್ಳಬಾರದೆಂದು ಆಗ್ರಹಿಸಿದರು.

ನಗರಸಭೆ ಅಧ್ಯಕ್ಷೆ ಸುಮಿತ, ಪೌರ ನೌಕರರ ಸಂಘದ ತಾಲ್ಲೂಕು ಅಧ್ಯಕ್ಷೆ ರೇಣುಕ, ಜಿಲ್ಲಾಧ್ಯಕ್ಷ ಎಲ್.ಪಿ.ಲವ, ಪುಟ್ಟಪ್ಪ, ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್, ಮಹಿಳಾ ಘಟಕದ ಅಧ್ಯಕ್ಷೆ ವೀಣಗೌರಣ್ಣ ಸೇರಿದಂತೆ ನೂರಾರು ಪೌರ ಕಾರ್ಮಿಕರು, ವಾಲ್‌ಮನ್‌ಗಳು, ನೀರು ಸರಬರಾಜುದಾರರು, ಚಾಲಕರು, ಹೆಲ್ತ್‌ಇನ್ಸ್‌ಪೆಕ್ಟರ್‌ಗಳು ಪ್ರತಿಭಟನಾ ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು.

## ರಸಗೊಬ್ಬರ ದಾಸ್ತಾನು ಜಪ್ತಿ



» ಚಿತ್ರದುರ್ಗ

ಪರವಾನಿಗೆ ಇಲ್ಲದ ರಸಗೊಬ್ಬರ ದಾಸ್ತಾನು ಮಳಿಗೆ ಮೇಲೆ ಕೃಷಿ ಇಲಾಖೆಯ ಬೆಂಗಳೂರು ಹಾಗೂ ಚಿತ್ರದುರ್ಗ ಜಾರಿದಳ ವಿಭಾಗದವರು ಮಂಗಳವಾರ ದಾಳಿ ನಡೆಸಿ ದಾಸ್ತಾನನ್ನು ಜಪ್ತಿ ಮಾಡಿದ್ದಾರೆ. ಸಾರ್ವಜನಿಕ ದೂರಿನ ಮೇರೆಗೆ ಚಿತ್ರದುರ್ಗ ತಾಲ್ಲೂಕಿನ ಹಿರೇಗುಂಟನೂರು ಹೋಬಳಿಯ ದೊಡ್ಡ ಆಲದಘಟ್ಟ ಗ್ರಾಮದಲ್ಲಿ ಬೆಂಗಳೂರು ಜಾರಿದಳ ವಿಭಾಗದ ಜಂಟಿ ಕೃಷಿ ನಿರ್ದೇಶಕ ಸಿ.ವಿದ್ಯಾನಂದ, ಉಪ ಕೃಷಿ ನಿರ್ದೇಶಕ ಟಿ.ಎನ್.ಅಶೋಕ್ ನೇತೃತ್ವದ ತಂಡ ಕಾರ್ಯಾಚರಣೆ ನಡೆಸಿ ಗ್ರಾಮದ ಕೆ.ಬಿ.ನಟರಾಜ್ ಇವರ ಮಳಿಗೆಯನ್ನು ತನಿಖೆ ಮಾಡಿದ ಸಂದರ್ಭದಲ್ಲಿ ಅನಧಿಕೃತವಾಗಿ ರಸಗೊಬ್ಬರ (ಎಂ.ಸಿ.ಎಫ್ ಸಂಸ್ಥೆಯ) 391 ಚೀಲಗಳು ಹಾಗೂ 20:20:0:13 ಕಾಂಪ್ಲೆಕ್ಸ್ ರಸಗೊಬ್ಬರ (ಎಂ.ಸಿ.ಎಫ್ ಸಂಸ್ಥೆಯ) 272 ಚೀಲಗಳು ಹಾಗೂ ಮೆಕ್ಕೆಜೋಳ ಬಿತ್ತನೆ ಬೀಜದ ದಾಸ್ತಾನು ಒಟ್ಟು 16.76 ಕ್ವಿಂಟಾಲ್‌ನಷ್ಟು ದಾಸ್ತಾನನ್ನು ಶೇಖರಿಸಿ ಯಾವುದೇ ಮಾರಾಟ ಪರವಾನಿಗೆ ಇಲ್ಲದೇ ಅನಧಿಕೃತವಾಗಿ ಮಾರಾಟ ಮಾಡುತ್ತಿರುವುದು ಕಂಡುಬಂದಿದ್ದು, ಈ ದಾಸ್ತಾನನ್ನು ರಸಗೊಬ್ಬರ ಹಾಗೂ ಬಿತ್ತನೆ ಬೀಜದ ನಿಯಮಾವಳಿಗಳು ಹಾಗೂ ಅಗತ್ಯ ವಸ್ತುಗಳ ಅಧಿನಿಯಮ–1955ರ ಉಲ್ಲಂಘನೆಯಾಗಿರುವ ಮೇರೆಗೆ ಈ ದಾಸ್ತಾನನ್ನು ಮಹಜರ್ ಮೂಲಕ ಪಂಚರ ಸಮಕ್ಷಮದಲ್ಲಿ ಜಪ್ತು ಮಾಡಲಾಯಿತು ಎಂದು ಕೃಷಿ ಇಲಾಖೆಯ ಸಹಾಯಕ ಕೃಷಿ ನಿರ್ದೇಶಕರಾದ (ಜಾರಿದಳ) ಜೆ.ಉಲ್ಫತ್ ಜೈಬಾ ತಿಳಿಸಿದ್ದಾರೆ. ರಸಗೊಬ್ಬರ ಮತ್ತು ಬಿತ್ತನೆ ಬೀಜದ ಮಾದರಿಗಳನ್ನು ಸಂಗ್ರಹಿಸಿ, ಗುಣಮಟ್ಟ ವಿಶ್ಲೇಷಣೆಗೆ ಪ್ರಯೋಗಾಲಯಕ್ಕೆ ಕಳುಹಿಸಿಕೊಡಲಾಗಿದೆ. ಅಲ್ಲದೇ ರಸಗೊಬ್ಬರ ನಿಯಂತ್ರಣ ಆದೇಶ–1985 ಹಾಗೂ ಬೀಜ ನಿಯಂತ್ರಣ ಆದೇಶ –1983 ಮತ್ತು ಅಗತ್ಯ ವಸ್ತುಗಳ ಅಧಿನಿಯಮ–1955ರ ಉಲ್ಲಂಘನೆ ಮೇರೆಗೆ ಕಾನೂನು ಕ್ರಮ ಕೈಗೊಳ್ಳಲಾಗಿದೆ ಎಂದು ಕೃಷಿ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ. ಕಾರ್ಯಚರಣೆ ವೇಳೆ ಚಿತ್ರದುರ್ಗ ವಿಭಾಗದ ಉಪ ಕೃಷಿ ನಿರ್ದೇಶಕ ಕೆ.ಎಸ್.ಶಿವಕುಮಾರ್, ಬೆಂಗಳೂರು ಜಾರಿದಳದ ಸಹಾಯಕ ಕೃಷಿ ನಿರ್ದೇಶಕ ಎಂ.ರೇಣುಕಾ ಪ್ರಸನ್ನ, ಚಿತ್ರದುರ್ಗ ಕೃಷಿ ಇಲಾಖೆ ಜಾರಿದಳದ ಸಹಾಯಕ ಕೃಷಿ ನಿರ್ದೇಶಕರಾದ ಜೆ.ಉಲ್ಫತ್ ಜೈಬಾ, ಎಚ್.ವಿ.ನಾಗರಾಜ, ಚಿತ್ರದುರ್ಗ ಸಹಾಯಕ ಕೃಷಿ ನಿರ್ದೇಶಕ ಎಚ್.ಕೆ.ರಾಮಕೃಷ್ಣ, ಹಿರೇಗುಂಟನೂರು ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ಕೆ.ಧನರಾಜ್, ಮಳಿಗೆಯ ಮಾಲೀಕ ನಟರಾಜ್ ಹಾಗೂ ದೊಡ್ಡ ಆಲದಘಟ್ಟ ಗ್ರಾಮಸ್ಥರು ಇದ್ದರು.

## ವಸತಿ ಶಾಲೆಯ ನೌಕರರು ಬೇಡಿಕೆಗಳಿಗಾಗಿ ಕಪ್ಪು ಪಟಿ

**ಪರಶುರಾಂಪುರ:** ವಸತಿ ಶಾಲೆಗಳ ನೌಕರರ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಗ್ರಾಮದ ಶ್ರೀಮತಿ ಇಂದಿರಾ ಗಾಂಧಿ ವಸತಿ ಶಾಲೆಯ ಶಿಕ್ಷಕರು ಗುರುವಾರ ಕಪ್ಪು ಪಟ್ಟಿ ಧರಿಸಿ ಕರ್ತವ್ಯ ನಿರ್ವಹಿಸಿದರು. ಈ ವೇಳೆಯಲ್ಲಿ ಪ್ರಾಚಾರ್ಯ ದಶರಥ, ಶಿಕ್ಷಕರಾದ ಶಿವರಾಜ್, ಶೋಭ, ಸುಮಯ, ವಿನಯ್, ರಾಜು, ರವಿ, ಭರತೇಶ್ ಇದ್ದರು.



## ಪ್ರಮುಖ ಸುದ್ದಿ

### ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್


# ಮುಟ್ಟಿನ ಸಮಯದಲ್ಲಿ ಶುಚಿತ್ವ ಕಾಪಾಡಿಕೊಳ್ಳುವುದು ಬಹಳ ಮುಖ್ಯ

» ಚಿತ್ರದುರ್ಗ

ಮುಟ್ಟಿನ ಸಂದರ್ಭದಲ್ಲಿ ಮಹಿಳೆಯನ್ನು ದೂರ ಇಡುವುದು, ಆಕೆಯನ್ನು ಅಶುಭ ಎಂದು ಭಾವಿಸುವುದು ಬಹಳ ದೊಡ್ಡ ತಪ್ಪು. ಅಲ್ಲದೇ ಋತು ಚಕ್ರದ ಸಂದರ್ಭದಲ್ಲಿ ಮಹಿಳೆಯರು ಶುಚಿತ್ವ ಕಾಪಾಡಿಕೊಳ್ಳುವುದು ಬಹಳ ಮುಖ್ಯ ಎಂದು ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್ ಹೇಳಿದರು.

ನಗರದ ಚಳ್ಳಕೆರೆ ರಸ್ತೆಯ ಪದ್ಮಾವತಿ ನರ್ಸಿಂಗ್ ಕಾಲೇಜಿನಲ್ಲಿ ಬುಧವಾರ ಆರೋಗ್ಯ ಇಲಾಖೆ ವತಿಯಿಂದ ವಿಶ್ವ ಋತುಚಕ್ರ ನೈರ್ಮಲ್ಯ ದಿನದ ಅಂಗವಾಗಿ ಹಮ್ಮಿಕೊಂಡಿದ್ದ ಮಾಹಿತಿ ಸಂವಹನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಹೆಣ್ಣಿನ ಜೀವನದಲ್ಲಿ ಋತುಚಕ್ರ ಬಹಳ ಪ್ರಮುಖ ಘಟ್ಟ. ಋತುಚಕ್ರದಿಂದ ಹುಡುಗಿ ಯುವತಿಯಾಗಿ ಬಡ್ತಿ ಪಡೆಯುತ್ತಾಳೆ. ನಂತರ ಆ ಯುವತಿ ಮದುವೆಯಾದ ಮೇಲೆ ಮಹಿಳೆಯಾಗಿ ಬದಲಾಗುತ್ತಾಳೆ. ಈ ಋತುಚಕ್ರ ಮಹಿಳೆ ಗರ್ಭ ಧರಿಸಲು ಅತ್ಯಗತ್ಯ ಕ್ರಿಯೆ. ಹಾಗಾಗಿ ಹೆಣ್ಣಾಗಿ ಹುಟ್ಟಿದ ಮೇಲೆ ಪಿರಿಯಡ್ಸ್ ಅಥವಾ ಋತುಚಕ್ರ ನೈಸರ್ಗಿಕ ಕ್ರಿಯೆಯನ್ನು ಅನುಭವಿಸಲೇಬೇಕು ಎಂದರು.




ಮುಟ್ಟಿನ ಸಮಯದಲ್ಲಿ ನಿಮ್ಮ ದೇಹವನ್ನು ಕಾಳಜಿ ವಹಿಸುವ ಸಾಮರ್ಥ್ಯವು ಈ ಮೂಲಭೂತ ಸ್ವಾತಂತ್ರ್ಯದ ಅತ್ಯಗತ್ಯ ಭಾಗವಾಗಿದೆ. ನಿಷೇಧಗಳನ್ನು ಮುರಿದು ಮುಟ್ಟಿನ ಸುತ್ತಲಿನ ಕಳಂಕವನ್ನು ಕೊನೆಗೊಳಿಸಿ ಎಂದು ಹೇಳಿದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಜಾನಕಿ ಮಾತನಾಡಿ, ಮುಟ್ಟಿನ ಉತ್ಪನ್ನಗಳ ಪ್ರವೇಶ, ಮುಟ್ಟಿನ ಬಗ್ಗೆ ಶಿಕ್ಷಣ ಮತ್ತು ಅವಧಿ ಸ್ನೇಹಿ ನೈರ್ಮಲ್ಯ ಸೌಲಭ್ಯಗಳ ಬಗ್ಗೆ ಸವಾಲುಗಳ ಬಗ್ಗೆ ಜಾಗೃತಿ ಮೂಡಿಸಿದರು. ಮುಟ್ಟಿನ ಬಗ್ಗೆ ಅರಿವು ಮೂಡಿಸುವುದು ಮತ್ತು ಮುಟ್ಟಿನ ಸ್ವಚ್ಛತೆ ಇಂದಿನ ಅಗತ್ಯವಾಗಿದೆ. ಸುರಕ್ಷಿತ ಮುಟ್ಟಿನ ನೈರ್ಮಲ್ಯ ಅಭ್ಯಾಸಗಳನ್ನು ಉತ್ತೇಜಿಸುವ ಮೂಲಕ ಮಹಿಳೆಯರ ಆರೋಗ್ಯವನ್ನು ಖಚಿತಪಡಿಸಿಕೊಳ್ಳೋಣ ಎಂದು ಹೇಳಿದರು.

ಶಿಕ್ಷಣದ ಕೊರತೆ, ನಿರಂತರ ನಿಷೇಧಗಳು ಮತ್ತು ಕಳಂಕ, ನೈರ್ಮಲ್ಯ ಮುಟ್ಟಿನ ಉತ್ಪನ್ನಗಳಿಗೆ ಸೀಮಿತ ಪ್ರವೇಶ ಮತ್ತು ಕಳಪೆ ನೈರ್ಮಲ್ಯ ಮೂಲಸೌಕರ್ಯ, ಆರೋಗ್ಯ, ಪ್ರಪಂಚದಾದ್ಯಂತ ಮಹಿಳೆಯರು ಮತ್ತು ಹುಡುಗಿಯರ ಒಟ್ಟಾರೆ ಸ್ಥಿತಿಯಿಂದಾಗಿ ಕಳಪೆ ಮುಟ್ಟಿನ ಚಕ್ರ ಉಂಟಾಗುತ್ತದೆ ಎಂದು ನಮಗೆ ತಿಳಿದಿದೆ. ಇದರಿಂದಾಗಿ ಲಕ್ಷಾಂತರ ಹುಡುಗಿಯರು ಮತ್ತು ಮಹಿಳೆಯರು ತಮ್ಮ ಸಾಮರ್ಥ್ಯವನ್ನು ತಲುಪಲು ಸಾಧ್ಯವಾಗುತ್ತಿಲ್ಲ ಎಂದರು.

ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಶ್ರೀನಿವಾಸ ಮಾತನಾಡಿದರು. ಕಾರ್ಯಕ್ರಮದಲ್ಲಿ ತಾಲ್ಲೂಕು ಆಶಾ ಭೋಧಕಿ ತಬಿತಾ, ಕಾಲೇಜಿನ ಪ್ರಾಂಶುಪಾಲ ವೆಂಕಟೇಶ, ಉಪನ್ಯಾಸಕರಾದ ರೇಣುಕಾ, ಗಂಗಮ್ಮ, ವೆಂಕಟೇಶ 100ಕ್ಕೂ ಹೆಚ್ಚು ವಿದ್ಯಾರ್ಥಿನಿಯರು ಭಾಗವಹಿಸಿದ್ದರು.


## ಫಾಸ್ಟ್ ನ್ಯೂಸ್

### ಎನ್‌ಎಸ್‌ಪಿ ಪೋರ್ಟನಲ್ಲಿ ಒಟಿಆರ್ ಸಂಖ್ಯೆಯನ್ನು ಸೃಜಿಸಿ

» ದಾವಣಗೆರೆ

ಪ್ರಸಕ್ತ ಸಾಲಿನಿಂದ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಂದ ಮೆಟ್ರಿಕ್ ಪೂರ್ವ 9 ಮತು 10 ನೇ ತರಗತಿ ಹಾಗೂ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ವಿದ್ಯಾರ್ಥಿವೇತನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ರಾಷ್ಟ್ರೀಯ ಸ್ಕಾಲರ್‌ಶಿಪ್ ಪೋರ್ಟಲ್‌ನಲ್ಲಿ ಒನ್‌ಟೈಂ ಪಾಸ್‌ವರ್ಡ್ ಸೃಜನೆ ಮಾಡಿ ನೊಂದಣಿ ಮಾಡಿದ ನಂತರ ರಾಜ್ಯ ವಿದ್ಯಾರ್ಥಿ ವೇತನದ ತಂತ್ರಾಂಶದಲ್ಲಿ ಎಸ್‌ಎಸ್‌ಪಿ ಅರ್ಜಿ ಸಲ್ಲಿಸಬೇಕೆಂದು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ತಿಳಿಸಿದ್ದಾರೆ.

### ಹೆಗ್ಗೆರೆ ಲಕ್ಷ್ಮೀದೇವಮ್ಮ ದೇವಸ್ಥಾನಕ್ಕೆ 2 ಲಕ್ಷ ರೂಪಾಯಿ ನೆರವು



» ಹೊಸದುರ್ಗ

ಕೆರೆಯ ನೀರನ್ನು ಕೆರೆಗೆ ಚೆಲ್ಲುವಂತೆ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯು ರಾಷ್ಟ್ರೀಕೃತ ಬ್ಯಾಂಕಿನಲ್ಲಿ ತೆಗೆದು ಸ್ವ ಸಹಾಯ ಸಂಘದ ಸದಸ್ಯರಿಗೆ ಕಡಿಮೆ ಬಡ್ಡಿದರದಲ್ಲಿ ಸಾಲವನ್ನು ನೀಡುತ್ತದೆ ಎಂದು ಸಮಾಜ ಸೇವಕ ಅಗ್ರೋ ಹೆಚ್.ಶಿವಣ್ಣ ತಿಳಿಸಿದರು. ತಾಲೂಕಿನ ಹೆಗ್ಗೆರೆ ಗ್ರಾಮದ ಲಕ್ಷ್ಮೀದೇವಮ್ಮ ದೇವಸ್ಥಾನಕ್ಕೆ 2 ಲಕ್ಷ ಡಿ.ಡಿ.ವಿತರಣೆ ಮಾಡಿ ಮಾತನಾಡಿದರು. ಅದರಲ್ಲಿ ಬಂದಂತಹ ಲಾಭವನ್ನು ವಾಪಾಸ್ಸು ಸಮುದಾಯ ಅಭಿವೃದ್ದಿಗೆ,ಕೆರೆ ಅಭಿವೃದ್ದಿಗೆ, ಮಧ್ಯವರ್ಜನ ಶಿಬಿರಗಳಿಗೆ ನೀಡುವ ಮೂಲಕ ಕೆರೆಯ ನೀರನ್ನು ಕೆರೆಗೆ ಚೆಲ್ಲುವಂತೆ ಅಭಿವೃದ್ದಿಯ ಹರಿಕಾರಿ ಡಾ.ವಿರೇಂದ್ರ ಹೆಗ್ಗಡೆಯವರು ಮಾಡುತ್ತಿದ್ದಾರೆ ಎಂದು ಶ್ಲಾಘಿಸಿದರು. ಯೋಜನಾಧಿಕಾರಿ ಶಿವಣ್ಣ. ಎಸ್ ಮಾತನಾಡಿ ಯುವ ಪೀಳಿಗೆಗೆ ಧಾರ್ಮಿಕ ಚಿಂತನೆಯ ಅರಿವನ್ನು ದೇವಸ್ಥಾನ ಅಡಳಿತ ಮಂಡಳಿಯಿಂದ ಮೂಡಿಸದಿದ್ದರೆ ಭವಿಷ್ಯದಲ್ಲಿ ಸಂಸ್ಕೃತಿ, ಸಂಸ್ಕಾರ ನಾಶವಾಗಬಹುದು. ಗುರು–ಹಿರಿಯರು,ಪೋಷಕರರ ಬಗ್ಗೆ ಮಕ್ಕಳಲ್ಲಿ ಗೌರವ ಕಡಿಮೆಯಾಗುತ್ತದೆ.ಈ ಬಗ್ಗೆ ಜಾಗೃತಿಯನ್ನು ಮೂಡಿಸಿ ಭಜನೆ,ಪೂಜೆಗಳಲ್ಲಿ ತೊಡಗಿಸಿಕೊಳ್ಳುವ ಅವಶ್ಯಕತೆ ಇದೆ ಎಂದು ತಿಳಿಸಿದರು. ಸಮಾಜ ಸೇವಕ ಶಂಕರಪ್ಪ ಹೆಗ್ಗೆರೆ ಮಾತನಾಡಿ ಶ್ರೀ ಕ್ಷೇತ್ರ ಧರ್ಮಸ್ಥಳದ ಡಾ ವಿರೇಂದ್ರ ಹೆಗ್ಗಡೆಯವರು ಹಲವಾರು ದಶಕಗಳಿಂದ ಸಮಾಜ ಸೇವೆಯಲ್ಲಿ ತೊಡಗಿದ್ದಾರೆ.ದೇವಾಸ್ಥಾನದ ಜಿರ್ಣೋದ್ದಾರ, ಜನಮಂಗಳ,ವಿದ್ಯಾರ್ಥಿಗಳಿಗೆ ಶಿಷ್ಯ ವೇತನ ಕಾರ್ಯಕ್ರಮಇದೇರೀತಿಹಲವಾರುಸಮಾಜಮುಖಿ ಕಾರ್ಯಕ್ರಮ ಮಾಡುತ್ತಿದೆ ಎಂದು ತಿಳಿಸಿದರು. ಆಧ್ಯಕ್ಷತೆಯನ್ನು ಊರಿನ ಮುಖಂಡ ತಿಮ್ಮೇಗೌಡ್ರು ವಹಿಸಿದ್ದರು. ಕಾರ್ಯಕ್ರಮದಲ್ಲಿ ಸಮಿತಿಯ ಕಾರ್ಯದರ್ಶಿ ಮಂಜಪ್ಪ, ಗವಿರಂಗಪ್ಪ ಗ್ರಾಮ ಪಂಚಾಯಿತಿ ಸದಸ್ಯರುಗಳಾದ ದಯಾನಂದ, ಜಗದೀಶ್, ಕೆ.ಡಿ.ಪಿ ಸದಸ್ಯೆ ದೀಪಿಕಾ ,ರೈತ ಸಂಘದ ಆಧ್ಯಕ್ಷ ಓಂಕಾರಪ್ಪ ಸೇರಿದಂತೆ ಗ್ರಾಮದ ಗಣ್ಯರು. ಸದಸ್ಯರು ಹಾಜರಿದ್ದರು.

### ರಾಷ್ಟ್ರೀಯ ಭಾವೈಕ್ಯತಾ ದೀಪ ಬೆಳಗಿಸಿದ ಎನ್ನೆಸ್ಸೆಸ್ ಶಿಬಿರಾರ್ಥಿಗಳು



» ಚಿತ್ರದುರ್ಗ


ದಾವಣಗೆರೆ ವಿಶ್ವವಿದ್ಯಾನಿಲಯ ಜಿಲ್ಲಾ ಮದಕರಿನಾಯಕ ವಿದ್ಯಾಸಂಸ್ಥೆ, ಮಹಾರಾಜ ಮದಕರಿನಾಯಕ ಕಲಾ ಮತ್ತು ವಾಣಿಜ್ಯ ಪ್ರಥಮ ದರ್ಜೆ ಕಾಲೇಜು ವತಿಯಿಂದ ಸಿದ್ದಾಪುರದಲ್ಲಿ ಏಳು ದಿನಗಳ ಕಾಲ ನಡೆದ ರಾಷ್ಟ್ರೀಯ ಸೇವಾ ಯೋಜನಾ ವಾರ್ಷಿಕ ವಿಶೇಷ ಶಿಬಿರದಲ್ಲಿ ವಿದ್ಯಾರ್ಥಿಗಳು ರಾಷ್ಟ್ರೀಯ ಭಾವೈಕ್ಯತಾ ದೀಪ ಬೆಳಗುವ ಮೂಲಕ ಭಾರತ ಮಾತೆಗೆ ನಮಿಸಿ ಇಡಿ ಗ್ರಾಮಸ್ಥರ ಕಣ್ಮನ ಸೆಳೆದರು. ನಿವೃತ್ತ ಪ್ರಾಚಾರ್ಯರಾದ ಪರಶುರಾಮ್ ಕಾಟವ್‌ಕರ್ ಮಾತನಾಡಿ ಎನ್.ಎಸ್.ಎಸ್. ಶಿಬಿರದಿಂದ ವಿದ್ಯಾರ್ಥಿಗಳು ಶಿಸ್ತು, ಸಮಯ ಪ್ರಜ್ಞೆ, ಸೇವಾ ಮನೋಭಾವ ಮೈಗೂಡಿಸಿಕೊಳ್ಳುವುದರ ಜೊತೆಗೆ ದೇಶ ಭಕ್ತಿ ಮೂಡಲಿದೆ ಎಂದು ಹೇಳಿದರು. ಸಹ ಪ್ರಾಧ್ಯಾಪಕರು ಹಾಗೂ ರಾಷ್ಟ್ರೀಯ ಸೇವಾ ಯೋಜನಾ ಘಟಕ–ರ ಶಿಬಿರಾಧಿಕಾರಿ ಪ್ರೊ. ಗಂಗಮ್ಮ ಎನ್.ಟಿ. ಸಹಾಯಕ ಪ್ರಾಧ್ಯಾಪಕ ಪ್ರೊ.ಶ್ರೀನಿವಾಸ ಎನ್. ಶಿಬಿರದ ನಿರ್ದೇಶಕರು, ಪ್ರಾಂಶುಪಾಲರಾದ ಡಿ.ಆರ್.ರಂಗಸ್ವಾಮಿ, ಸಿದ್ದಾಪುರ ಗ್ರಾಮ ಪಂಚಾಯಿತಿ ಅಧ್ಯಕ್ಷರು ಹಾಗೂ ಸದಸ್ಯರುಗಳು ರಾಷ್ಟ್ರೀಯ ಭಾವೈಕ್ಯತಾ ದೀಪೋತ್ಸವದಲ್ಲಿ ಭಾಗವಹಿಸಿದ್ದರು.

# 5ನೇ ದಿನದತ್ತ ಪೌರಕಾರ್ಮಿಕರ ಮುಷ್ಕರ

## ಬೇಡಿಕೆ ಈಡೇರಿಕೆಗೆ ಪಟ್ಟು: ಪೌರಕಾರ್ಮಿಕರ ಹಿತರಕ್ಷಣೆಗೆ ಸರ್ಕಾರಕ್ಕೆ ಮನವಿ: ರಘುಮೂರ್ತಿ

» ಚಳ್ಳಕೆರೆ

ಇಲ್ಲಿನ ನಗರಸಭೆ ಪೌರನೌಕರರು ಹೊರಗುತ್ತಿಗೆದಾರರ ಪೌರಕಾರ್ಮಿಕರ ಸಹಕಾರದಿಂದ ಮೇ.26ರಿಂದಲೇ ತಮ್ಮ ಬೇಡಿಕೆಗಳನ್ನುಈಡೇರಿಸುವಂತೆಒತ್ತಾಯಿಸಿ ನಗರಸಭೆಯ ಕಾರ್ಯಾಲಯದ ಮುಂಭಾಗದಲ್ಲಿ ಪ್ರತಿಭಟನೆ ನಡೆಸುತ್ತಿದ್ದು, ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ದಿ ಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ಸ್ಥಳಕ್ಕೆ ಭೇಟಿ ನೀಡಿ ಪೌರಕಾರ್ಮಿಕರಿಂದ ಮನವಿಯನ್ನು ಸ್ವೀಕರಿಸಿದರು.



ಪೌರಕಾರ್ಮಿಕರನ್ನು ಉದ್ದೇಶಿಸಿ ಮಾತನಾಡಿದವರು, ಪ್ರತಿನಿತ್ಯ ಪೌರಕಾರ್ಮಿಕರು ಮತ್ತು ನೌಕರರು ಸಾರ್ವಜನಿಕರ ಹಿತದೃಷ್ಠಿಯಿಂದ ಉತ್ತಮ ಕಾರ್ಯನಿರ್ವಹಿಸುತ್ತಿದ್ದು, ತಮ್ಮ ಬೇಡಿಕೆಗಳಲ್ಲಿ ಸತ್ಯಾಂಶವಿದೆ. ಕಳೆದ ಹಲವಾರುವರ್ಷಗಳಿಂದತಾವುಬೇಡಿಕೆಗಳ ಈಡೇರಿಕೆಗೆ ಒತ್ತಾಯ ಪಡಿಸುತ್ತಿರುವುದು ನ್ಯಾಯಯುತವಾಗಿದೆ. ನಾನು ಸಹ ನಿಮ್ಮ ಬೇಡಿಕೆಗಳನ್ನು ಈಡೇರಿಸಬೇಕೆಂಬ ಸಹಮತ ಹೊಂದಿದ್ದೇನೆ. ನಿಮ್ಮ ಹಲವಾರು ಸಮಸ್ಯೆಗಳನ್ನು ಕುರಿತು ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಹಾಗೂ ಪೌರಾಡಳಿತ ಸಚಿವರೊಂದಿಗೆ ಚರ್ಚಿಸಿ ನಿಮಗೆ ನ್ಯಾಯವನ್ನು ದೊರಕಿಸುವ ನಿಟ್ಟಿನಲ್ಲಿ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸುತ್ತೇನೆ. ನಗರದಲ್ಲಿ ನೀವು ಸಲ್ಲಿಸುತ್ತಿರುವ ಸೇವೆಯ ಬಗ್ಗೆ ಸಾರ್ವಜನಿಕರಲ್ಲಿ ಅಪಾರವಾದ ಗೌರವವಿದೆ. ನಿಮ್ಮ ಸಮಸ್ಯೆಯನ್ನು ನಿವಾರಿಸಿಕೊಳ್ಳಲು ನೀವು ಅನಿವಾರ್ಯವಾಗಿ ಮುಷ್ಕರದ ಹಾದಿ ಹಿಡಿದಿದ್ದೀರ, ನಾನು ಈ ಕ್ಷೇತ್ರದ ಶಾಸಕನಾಗಿ ನಿಮ್ಮ ಬೇಡಿಕೆಗಳ ಈಡೇರಿಕೆಗೆ ಹೆಚ್ಚು ಆದ್ಯತೆ ನೀಡಿ ಸಮಸ್ಯೆಯ ಪರಿಹಾರಕ್ಕೆ ಯತ್ನಿಸುವೆ ಎಂದರು. ನಗರಸಭೆ ಅಧ್ಯಕ್ಷೆ ಆರ್. ಮಂಜುಳಾಪ್ರಸನ್ನಕುಮಾರ್, ಉಪಾಧ್ಯಕ್ಷೆ ಕವಿತಾಬೋರಯ್ಯ, ಸ್ಥಾಯಿಸಮಿತಿ ಅಧ್ಯಕ್ಷ ಟಿ.ಮಲ್ಲಿಕಾರ್ಜುನ್, ಸದಸ್ಯರಾದ ಸುಮಭರಮಯ್ಯ, ಬಿ.ಟಿ.ರಮೇಶ್‌ಗೌಡ, ಎಂ.ಜೆ.ರಾಘವೇಂದ್ರ, ನಾಮನಿರ್ದೇಶನ ಸದಸ್ಯ ಆರ್.ವೀರಭದ್ರಪ್ಪ, ಕಾಂಗ್ರೆಸ್ ಮುಖಂಡರಾದ ಕೃಷ್ಣಮೂರ್ತಿ, ಪಾಲಯ್ಯ, ಪೌರನೌಕರರ ಸಂಘದ ಅಧ್ಯಕ್ಷ ಇ.ತಿಪ್ಪೇಸ್ವಾಮಿ, ಮುಷ್ಕರದಲ್ಲಿ ಕಂದಾಯಾಧಿಕಾರಿ ಸತೀಶ್, ವ್ಯವಸ್ಥಾಪಕ ಲಿಂಗರಾಜು, ಉಪಾಧ್ಯಕ್ಷ ಎಚ್.ಟಿ.ಮಹಲಿಂಗಪ್ಪ, ಪ್ರಧಾನ ಕಾರ್ಯದರ್ಶಿ ಟಿ.ಎನ್.ವಿಶ್ವನಾಥ, ಗೌರವಾಧ್ಯಕ್ಷ ಎನ್.ತಿಪ್ಪೇಸ್ವಾಮಿ, ಸಂಘಟನಾ ಕಾರ್ಯದರ್ಶಿ ಎಸ್.ವೀರಭದ್ರಪ್ಪ, ಜಂಟಿಕಾರ್ಯದರ್ಶಿ ಓ.ಮಂಜುನಾಥ, ನಿರ್ದೇಶಕರಾದ ಡಿ.ಭಾಸ್ಕರ್, ಆರ್.ಚೇತನ್, ಕೆ.ಗಿರೀಶ್, ಬಕ್ಷಿಸಾಬ್, ಕೆ.ವೀರೇಶ್, ಸುವರ್ಣಮ್ಮ, ಕಾನೂನು ಸಲಹೆಗಾರಾದ ಎಚ್.ಟಿ.ಲಿಂಗರಾಜು, ಕೆ.ಗುರುಪ್ರಸಾದ್, ಓಬಳೇಶ್, ಭೋರಯ್ಯ, ಗಣೇಶ್, ಸತೀಶ್, ಎಸ್.ಎಲ್.ಮಂಜಣ್ಣ, ಪ್ರಸನ್ನಕುಮಾರ್, ಮಹೇಶ್, ಹೊರಗುತ್ತಿಗೆ ನೌಕರರ ಸಂಘದ ಅಧ್ಯಕ್ಷ ಶ್ರೀನಿವಾಸ್, ಉಪಾಧ್ಯಕ್ಷ ಪೆನ್ನೇಶ್ ಮುಂತಾದವರು ಭಾಗವಹಿಸಿದ್ದರು.

## ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಪಟ್ಟಣದ ಪೌರ ನೌಕರರ ಸಂಘ ಅನಿರ್ದಿಷ್ಟಾವಧಿ ಮುಷ್ಕರ

» ಹೊಸದುರ್ಗ

ಸರ್ಕಾರಿ ನೌಕರರೆಂದು ಪರಿಗಣಿಸುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಪಟ್ಟಣದ ಸ್ವಚ್ಚತೆಯ ಕಾರ್ಯ ಹಾಗೂ ಕಛೇರಿಯ ಕೆಲಸಗಳನ್ನ ಕೈ ಬಿಟ್ಟು ಪಟ್ಟಣದ ಪೌರ ನೌಕರರ ಸಂಘದವರು ಅನಿರ್ದಿಷ್ಟಾವಧಿ ಮುಷ್ಕರ ಕೈಗೊಂಡರು. ಪೌರ ಕಾರ್ಮಿಕರು, ಕ್ಲೀನರ್‌ಗಳು, ನೀರು ಸರಬರಾಜುದಾರರು ಸೇರಿದಂತೆ ಸಂಘದಡಿ ಬರುವ ಎಲ್ಲಾ ನೌಕರರು ಕರ್ತವ್ಯಕ್ಕೆ ಗೈರು ಹಾಜರಾಗಿ ಪುರಸಭೆ ಎದುರು ಪ್ರತಿಭಟಿಸಿದರು.



ಪೌರ ವೃಂದದ ನೌಕರರನ್ನು ಸರ್ಕಾರಿ ನೌಕರರೆಂದು ಪರಿಗಣಿಸಬೇಕು. ಕೆಜಿಐಡಿ, ಜಿಪಿಎಸ್ ಜ್ಯೋತಿ ಸಂಜೀವಿನಿ ಸೇರಿದಂತೆ ಸರ್ಕಾರಿ ನೌಕರರಿಗೆ ಸಿಗುವ ಇತರೆ ಸೌಲಭ್ಯಗಳನ್ನು ಪೌರ ನೌಕರರಿಗೂ ಜಾರಿ ಮಾಡಬೇಕು. ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ ನೀರು ಸರಬರಾಜು ಸಿಬ್ಬಂದಿ, ಕ್ಲೀನರ್, ಪೌರಕಾರ್ಮಿಕರು, ಸೂಪರ್‌ವೈಸರ್, ಕಂಪ್ಯೂಟರ್ ಆಪರೇಟರ್, ಪ್ರೋಗ್ರಾಮರ್ ಸೇರಿದಂತೆ ಗುತ್ತಿಗೆ ಹೊರಗುತ್ತಿಗೆ ಮೂಲಕ ಕಾರ್ಯ ನಿರ್ವಹಿಸುತ್ತಿರುವ ಜ್ಯೂನಿಯರ್ ಸಿಬ್ಬಂದಿಗೂ ನೇರ ವೇತನ ಪಾವತಿ ಮಾಡಿ, ಖಾಯಂ ಮಾಡಬೇಕು'ಎಂದು ಆಗ್ರಹಿಸಿದರು. ಈ ವೇಳೆ ಪೌರ ಕಾರ್ಮಿಕರು, ಪುರಸಭೆ ಸಿಬ್ಬಂದಿಗಳು ಹಾಜರಿದ್ದರು.

ಪುರಸಭಾ ಅಧ್ಯಕ್ಷೆ ರಾಜೇಶ್ವರಿ, ಉಪಾಧ್ಯಕ್ಷೆ ಗೀತಾ, ಮುಖ್ಯಾಧಿಕರಿ ಯೋಗೀಶ್, ಅರೋಗ್ಯ ಇಲಾಖೆಯ ಬಸವರಾಜ್.ಕಲ್ಪನ,ಸೇರಿದಂತೆ ಮತ್ತಿತರರು ಭಾಗವಹಿಸಿ ಬೆಂಬಲ ಸೂಚಿಸಿದರು.

## ಸರ್ಕಾರಿ ಉರ್ದು ಶಾಲೆಯಲ್ಲಿ ಮಕ್ಕಳಿಗೆ ಗುಲಾಬಿ ಹೂವು ನೀಡಿ ಸ್ವಾಗತ



» ಚಿತ್ರದುರ್ಗ

ಒಂದರಿಂದ ಹತ್ತನೆ ತರಗತಿ ಶಾಲೆಗಳು ಗುರುವಾರದಿಂದ ಆರಂಭಗೊಂಡಿದ್ದು, ಎಲ್ಲೆಡೆ ಶಾಲ 'ಗಳಿಗೆ ತಳಿರು ತೋರಣಗಳನ್ನು ಕಟ್ಟಿ ವಿದ್ಯಾರ್ಥಿಗಳನ್ನು ಬರಮಾಡಿಕೊಳ್ಳಲಾಯಿತು.

ಹಳೆ ಮಾಧ್ಯಮಿಕ ಶಾಲಾ ಆವರಣದಲ್ಲಿರುವ ಸರ್ಕಾರಿ ಉರ್ದು ಹಿರಿಯ ಪ್ರಾಥಮಿಕ ಶಾಲೆಯ ಎಸ್.ಡಿ.ಎಂ.ಸಿ. ಅಧ್ಯಕ್ಷ ಸೈಯದ್ ಇಸ್ಮಾಯಿಲ್ ಮಕ್ಕಳಿಗೆ ಬಲೂನ್ ಹಾಗೂ ಗುಲಾಬಿ ಹೂಗಳನ್ನು ನೀಡಿ ಶಾಲೆಗೆ ಬರಮಾಡಿಕೊಂಡು ಮಾತನಾಡುತ್ತ ಸರ್ಕಾರಿ ಶಾಲೆಯ ಮಕ್ಕಳಿಗೆ ಮಧ್ಯಾಹ್ನದ ಬಿಸಿಯೂಟ, ಪಠ್ಯಪುಸ್ತಕ, ಸಮವಸ್ತ್ರ, ಶೂ, ಸಾಕ್ಸ್‌ಗಳನ್ನು ನೀಡಲಾಗುತ್ತಿದೆ. ಅದೇ ರೀತಿಯ ಉರ್ದು ಶಾಲೆಗಳಿಗೆ ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ದಾಖಲಾಗಬೇಕಾಗಿರುವುದರಿಂದ ಸರ್ಕಾರ ಮುತುವರ್ಜಿ ವಹಿಸಿ ಬಲವರ್ಧನೆಗೊಳಿಸಬೇಕೆಂದು ಮನವಿ ಮಾಡಿದರು.

ಸರ್ಕಾರಿ ಉರ್ದು ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕಿ ಸುಮಯ್ಯಭಾನು, ಶಿಕ್ಷಕಿಯರುಗಳಾದ ಲತಾ, ಉಮ, ಫಾತಿಮ ಇವರುಗಳು ಈ ಸಂದರ್ಭದಲ್ಲಿ ಹಾಜರಿದ್ದರು.

## ಪೌರಕಾರ್ಮಿಖಕರ ಮುಷ್ಕರಕ್ಕೆ ಸಂವಿಧಾನ ವಿಚಾರವೇದಿಕೆ, ಮಾನವ ಹಕ್ಕು ಆಯೋಗದ ಫೌಂಡೇಷನ್ ಬೇಷರತ್ ಬೆಂಬಲ

» ಚಳ್ಳಕೆರೆ

ಪ್ರತಿನಿತ್ಯವೂ ಸ್ವಚ್ಚತೆಯ ಮೂಲಕ ಸಾರ್ವಜನಿಕ ಬದುಕಿಗೆ ನೆಮ್ಮದಿಯನ್ನು ಮೂಡಿಸುತ್ತಿರುವ ಪೌರಕಾರ್ಮಿಕರು ಮತ್ತು ಅವರ ನಿತ್ಯದ ಸೇವೆಯನ್ನು ನಾವೆಲ್ಲರೂ ಸ್ಮರಿಸಬೇಕಿದೆ. ಕಳೆದ ಹಲವಾರು ವರ್ಷಗಳಿಂದ ತಮ್ಮ ಮೂಲಭೂತ ಬೇಡಿಕೆಗಳ ಈಡೇರಿಕೆಗೆ ಮುಷ್ಕರ ನಡೆಸುತ್ತಿದ್ದು, ಅವರ ಮುಷ್ಕರಕ್ಕೆ ಸರ್ಕಾರ ಪೂರ್ಣಪ್ರಮಾಣದಲ್ಲಿ ಸ್ಪಂದಿಸಿ ಬೇಡಿಕೆ ಈಡೇರಿಸಬೇಕೆಂದು ತಾಲ್ಲೂಕು ಸಂವಿಧಾನ ವಿಚಾರವೇದಿಕೆ ಹಾಗೂ ಮಾನವಹಕ್ಕುಗಳ ಆಯೋಗದ ಫೌಂಡೇಷನ್ ತಾಲ್ಲೂಕು ಅಧ್ಯಕ್ಷ ಬಿ.ತಿಪ್ಪೇಸ್ವಾಮಿ(ಎಲ್‌ಐಸಿ) ತಿಳಿಸಿದರು. ಮುಷ್ಕರ ನಿರತ ಪೌರನೌಕರರು ಹಾಗೂ ಕಾರ್ಮಿಕರನ್ನು ಭೇಟಿಮಾಡಿ ಬೆಂಬಲ ವ್ಯಕ್ತಪಡಿಸಿದರಲ್ಲದೆ, ನಿಮ್ಮ ಬೇಡಿಕೆಯನ್ನು ಈಡೇರಿಸುವ ನಿಟ್ಟಿನಲ್ಲಿ ಸರ್ಕಾರ ಕೂಡಲೇ ಕಾರ್ಯೋನ್ಮುಖವಾಗಬೇಕಿದೆ. ನಿಮ್ಮ ನ್ಯಾಯಯುತ ಬೇಡಿಕೆಗಳು ಈಡೇರಿಕೆಗೆ ಸರ್ಕಾರದ ಸ್ಪಂದನೆ ಅಗತ್ಯವಿದೆ. ನಿಮ್ಮ ಹೋರಾಟಕ್ಕೆ ನಮ್ಮೆಲ್ಲರ ಬೆಂಬಲವಿದೆ ಎಂದರು. ಕಾರ್ಯದರ್ಶಿ ಪರಸಪ್ಪ, ಸದಸ್ಯ ರಾಜಣ್ಣ ಉಪಸ್ಥಿತರಿದ್ದರು.



## ಪಾವಗಡ ರೈಲ್ವೆ ಮೇಲ್ಸೇತುವೆ 7 ದಿನದಲ್ಲಿ ಭೂಮಿಪೂಜೆ ಕಾಮಗಾರಿ ಆರಂಭಿಸದೇ ಇದ್ದರೆ ಕೇಂದ್ರ ರೈಲ್ವೆ ಸಚಿವರ ವಿರುದ್ದ ಪ್ರತಿಭಟನೆ



» ಚಳ್ಳಕೆರೆ

ತಾಲ್ಲೂಕಿನ ಮಣ್ಣಿನ ಮಗ, ಕೇಂದ್ರ ಸರ್ಕಾರದ ಮಾಜಿ ರೈಲ್ವೆ ಮಂತ್ರಿ ದೊಡ್ಡೇರಿಯ ಜಾಫರ್‌ಶರೀಫ್‌ರವರು ಚಳ್ಳಕೆರೆ ತಾಲ್ಲೂಕಿಗೆ ಕಳೆದ 30 ವರ್ಷಗಳ ಹಿಂದೆಯೇ ರೈಲಿನ ಸೌಲಭ್ಯವನ್ನು ಕಲ್ಪಿಸಿದ ಮಹಾನೀಯರು. ಅವರು ಚಳ್ಳಕೆರೆ ತಾಲ್ಲೂಕಿಗೆ ರೈಲುತರುವ ವಿಚಾರದಲ್ಲಿ ನಿರಂತರವಾಗಿ ಹೋರಾಟ ನಡೆಸಿದವರು. ರೈಲ್ವೆ ಇಲಾಖೆ ಈ ಭಾಗದ ಸಾರ್ವಜನಿಕರಿಗೆ, ವ್ಯಾಪಾರಸ್ಥರಿಗೆ ಹೆಚ್ಚಿನ ಸೌಲಭ್ಯ ನೀಡುತ್ತಿದ್ದರೂ ಪಾವಗಡ ರಸ್ತೆಯಲ್ಲಿ ಸಂಚಾರ ನಡೆಸುತ್ತಿರುವ ಸಾರ್ವಜನಿಕರು, ವಾಹನಗಳಿಗೆ ಕಳೆದ 30 ವರ್ಷಗಳಿಂದ ರೈಲ್ವೆ ಮೇಲ್ಸೇತುವೆ ನಿರ್ಮಾಣವಾಗದೆ ತೊಂದರೆ ಅನುಭವಿಸುತ್ತಿದ್ದು, ಕೇಂದ್ರ ಸರ್ಕಾರ ರೈಲ್ವೆ ಸಚಿವರಿಗೆ ಹಲವಾರು ಬಾರಿಮನವಿ ಮಾಡಿದರೂ ಮೇಲ್ಸೇತುವೆ ನಿರ್ಮಾಣವಾಗದೆ ಇರುವುದು ಈ ಭಾಗದ ರೈತರಿಗೆ ಹೋರಾಟಗಾರರಿಗೆ ನೋವುತಂದಿದೆ. ಇಲ್ಲಿನ ಪ್ರವಾಸಿಮಂದಿರದಲ್ಲಿ ರೈತ ಸಂಘ ರಾಜ್ಯಉಪಾಧ್ಯಕ್ಷ ರೆಡ್ಡಿಹಳ್ಳಿವೀರಣ್ಣ, ಕೆ.ಪಿ.ಭೂತಯ್ಯ ಹಾಗೂ ವಿವಿಧ ಸಂಘಟನೆಗಳ ಹೋರಾಟಗಾರರಿಂದ ಗುರುವಾರ ಪತ್ರಿಕಾಗೋಷ್ಠಿ ನಡೆಸಿ ಎಂಟು ದಿನಗಳ ಒಳಗೆ ಕೇಂದ್ರ ರೈಲ್ವೆ ಸಚಿವರು ಮೇಲ್ಸೇತುವೆ ನಿರ್ಮಾಣಕ್ಕೆ ಭೂಮಿಪೂಜೆ ನಡೆಸದೇ ಇದ್ದಲ್ಲಿ ಉಗ್ರಹೋರಾಟ ನಡೆಸುವ ಎಚ್ಚರಿಕೆಯನ್ನು ನೀಡಿದರು. ಕೆ.ಪಿ.ಭೂತಯ್ಯ ಮಾತನಾಡಿ, ಇತ್ತೀಚೆಗೆ ಚಿತ್ರದುರ್ಗದಲ್ಲಿ ಕೇಂದ್ರ ರೈಲ್ವೆ ಸಹಾಯಕಸಚಿವ ವಿ.ಸೋಮಣ್ಣ, ಲೋಕಸಭಾ ಸದಸ್ಯ ಗೋವಿಂದ ಎಂ.ಕಾರಜೋಳ ಚರ್ಚೆ ನಡೆಸಿ ಚಿತ್ರದುರ್ಗ ನಗರದ ಮೇಲ್ಸೇತುವೆ ಬಗ್ಗೆ ಮಾಹಿತಿ ನೀಡಿದ್ದಾರೆ. ಆದರೆ, ಚಳ್ಳಕೆರೆಯ ಬಗ್ಗೆ ಚಕಾರವೆತ್ತಿಲ್ಲ. ಆದ್ದರಿಂದ ಹೋರಾಟ ನಡೆಸಲು ಸಿದ್ದತೆಗಳು ನಡೆಯುತ್ತಿವೆ ಎಂದರು. ರೆಡ್ಡಿಹಳ್ಳಿವೀರಣ್ಣ ಮಾತನಾಡಿ, ಕೇಂದ್ರ ಸರ್ಕಾರ ಈ ಭಾಗಕ್ಕೆ ಕೇವಲ ರೈಲು ನೀಡಿ ಜನರ ಕಷ್ಟಸುಖಗಳಿಗೆ ಸ್ಪಂದನೆ ಮಾಡದೇ ಇರುವುದು ನೋವಿ ಸಂಗತಿ. ಅಖಂಡ ಕರ್ನಾಟಕ ರೈತ ಸಂಘದ ಚಿಕ್ಕಣ್ಣ, ರೈತ ಸಂಘದ ಜಿಲ್ಲಾ ಮುಖಂಡರಾದ ಶ್ರೀಕಂಠಮೂರ್ತಿ ಇದ್ದರು.

## ಪ್ರಮುಖ ಸುದ್ದಿ

# ಬೆಸ್ಕಾಂ: 38ಲಕ್ಷ ಮೌಲ್ಯದ ಸುಸಜ್ಜಿತ ವಾಹನ ಸೇವೆಗೆ ಸಮರ್ಪಿಸಿದ ಶಾಸಕ ಟಿ.ರಘುಮೂರ್ತಿ

» ಚಳ್ಳಕೆರೆ

ಕಳೆದ ಹಲವಾರು ವರ್ಷಗಳಿಂದ ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ(ಬೆಸ್ಕಾಂ) ತಾಲ್ಲೂಕಿನಾದ್ಯಂತ ಬೆಸ್ಕಾಂ ಇಲಾಖೆ ಟ್ರಾನ್ಸ್‌ಫಾರ್ಮರ್ ಸೇರಿದಂತೆ ಇತರೆ ವಸ್ತುಗಳನ್ನು ಸಾಗಾಟ ಮಾಡಲು ಸೂಕ್ತ ಸೌಲಭ್ಯವಿರಲಿಲ್ಲ. ಆದರೆ, ಈಗ ಸುಸಜ್ಜಿತವಾದ 38ಲಕ್ಷ ಮೌಲ್ಯದ ಸಿದ್ದಪಡಿಸಿದ ವಾಹನವನ್ನು ನೀಡಿದ್ದು ಇದರ ಸದುಪಯೋಗ ಸದ್ವಿನಿಯೋಗವಾಗಲಿ ಎಂದು ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ದಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.




ಅವರು, ಗುರುವಾರ ಬೆಸ್ಕಾಂ ಇಲಾಖೆ ಕಾರ್ಯಾಲಯದ ಮುಂಭಾಗದಲ್ಲಿ ಇಲಾಖೆಯಿಂದ ನೀಡಲಾದ ವಾಹನಕ್ಕೆ ಚಾಲನೆ ನೀಡಿ ಮಾತನಾಡಿದರು. ಸದರಿ ವಾಹನ ನಗರ ಹಾಗೂ ತಾಲ್ಲೂಕಿನಾದ್ಯಂತ ಬೃಹತ್ ಪ್ರಮಾಣದ ಕಾಮಗಾರಿಗಳನ್ನು ಕೈಗೊಂಡ ಸಂದರ್ಭದಲ್ಲಿ ಅಲ್ಲಿಗೆ ಸಾಮಾಗ್ರಿಗಳನ್ನು ಸಾಗಾಟ ಮಾಡಲು ನೆರವಾಗಲಿದೆ. ಸಾರ್ವಜನಿಕರ ಹಿತದೃಷ್ಠಿಯಿಂದ ಬೆಸ್ಕಾಂ ಇಲಾಖೆ ಉತ್ತಮ ಕೆಲಸ ಮಾಡುತ್ತಿದೆ ಎಂದು ಪ್ರಶಂಸಿಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಸಹಾಯಕ ಕಾರ್ಯಪಾಲಕ ಅಭಿಯಂತರ ಜಿ.ಶಿವಪ್ರಸಾದ್, ಇತ್ತೀಚಿನ ದಿನಗಳಲ್ಲಿ ನಗರವೂ ಸೇರಿದಂತೆ ಗ್ರಾಮೀಣ ಭಾಗದಲ್ಲಿ ತುರ್ತು ಕಾಮಗಾರಿ ಸಂದರ್ಭದಲ್ಲಿ ಸಕಾಲದಲ್ಲಿ ವಾಹನ ಬಳಸಲು ಸಾಧ್ಯವಾಗುತ್ತಿಲ್ಲ. ಇತ್ತೀಚಿನದಿನಗಳಲ್ಲಿ ತುರ್ತು ರಿಪೇರಿ ಅಗತ್ಯಬಿದ್ದಾಗ ವಾಹನದ ಅಲಭ್ಯತೆಯಿಂದ ಕಾಮಗಾರಿ ವಿಳಂಬಾಗುತ್ತಿತ್ತು. ಹಾಗಾಗಿ ಮನವಿಮೇರೆಗೆ ಇಲಾಖೆ ವಾಹನಸೌಲಭ್ಯ ನೀಡಿದೆ. ಈ ಕ್ಷೇತ್ರದ ಅಭಿವೃದ್ದಿಹರಿಕಾರ ಟಿ.ರಘುಮೂರ್ತಿ ಇದನ್ನು ಸಾರ್ವಜನಿಕ ಸೇವೆಗೆ ಸಮರ್ಪಿಸಿರುವುದು ಸಂತಸ ತಂದಿದೆ ಎಂದರು.

